# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 | Issue : 38 | TUESDAY 14-04-2026 | PRGI No : KNKAN/26/A0962 | Pages:4 | Rs.2.00 | M: 9742418836


## ಒಂದು ಸಲ ಅಧಿಕಾರ ಕೊಟ್ಟು ನೋಡಿ, ರಾಜ್ಯಕ್ಕೆ ಹಿಡಿದಿರೋ ಗ್ರಹಣ ಬಿಡಿಸ್ತೀನಿ: ಕುಮಾರಸ್ವಾಮಿ



ಬೆಂಗಳೂರು: ಜೆಡಿಎಸ್ ಗೆ ಒಂದು ಸಲ ಅಧಿಕಾರ ಕೊಟ್ಟು ನೋಡಿ, ರಾಜ್ಯಕ್ಕೆ ಹಿಡಿದಿರೋ ಗ್ರಹಣವನ್ನು ಬಿಡಿಸುತ್ತೇನೆ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಶನಿವಾರ ಹೇಳಿದ್ದಾರೆ.

ಜೆಡಿಎಸ್ ಗೆ 25 ವರ್ಷ ತುಂಬಿದ ಹಿನ್ನೆಲೆಯಲ್ಲಿ ಇಂದು ಬೆಂಗಳೂರಿನ ಕೊಮ್ಮಘಟ್ಟದ ಬಳಿ ಬೃಹತ್ ಸಮಾವೇಶ ಹಮ್ಮಿಕೊಳ್ಳಲಾಗಿತ್ತು. ಸಮಾವೇಶದಲ್ಲಿ 1 ಲಕ್ಷ ಹೆಚ್ಚು ಜನ ಭಾಗಿಯಾಗಿದ್ದರು. ಮಾಜಿ ಪ್ರಧಾನಿ ದೇವೇಗೌಡ, ಕೇಂದ್ರ ಸಚಿವ ಕುಮಾರಸ್ವಾಮಿ, ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸೇರಿ ಪಕ್ಷ ಹಾಲಿ, ಮಾಜಿ, ಶಾಸಕರು, ಸಂಸದರು ಭಾಗಿಯಾಗಿದ್ದರು.

ಬೆಳ್ಳಿ ಹಬ್ಬದ ಸಮಾವೇಶ ಉದ್ದೇಶಿಸಿ ಮಾತನಾಡಿದ ಕುಮಾರಸ್ವಾಮಿ ಅವರು, ಕರ್ನಾಟಕಕ್ಕೆ ಹಿಡಿದಿರೋ ಗ್ರಹಣ ಮುಕ್ತಿಗಾಗಿ ಜೆಡಿಎಸ್ ಗೆ ಒಂದು ಬಾರಿ ಅವಕಾಶ ಕೊಡಿ ಎಂದು ಮನವಿ ಮಾಡಿದರು.

ಬೆಂಗಳೂರಿಗೆ ಮೆಟ್ರೋ ಯೋಜನೆ ಸೇರಿ ಅನೇಕ ಯೋಜನೆ ಕೊಟ್ಟವನು ನಾನು, ಈ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ. ಚದರ ಅಡಿಗೆ 100 ರೂ. ಫಿಕ್ಸ್ ಮಾಡಿದೆ ಎಂದು ಮಾಜಿ ಸಿಎಂ ಆರೋಪಿಸಿದರು.

ನಾನು ಎರಡು ಬಾರಿ ಮುಖ್ಯಮಂತ್ರಿ ಆಗಿದ್ದರೂ ಜನರ ಆಶೀರ್ವಾದದಿಂದ ಸಿಎಂ ಆಗಿಲ್ಲ ಎಂದ ಕುಮಾರಸ್ವಾಮಿ ಒಂದು ಬಾರಿ ಜೆಡಿಎಸ್ ಅಧಿಕಾರ ಕೊಡಿ ಎಂದು ಮನವಿ ಮಾಡಿದರು.

ಕೋಗಿಲು ಬಡಾವಣೆಯಲ್ಲಿ ಮನೆಗಳ ನೆಲಸಮ ವಿಚಾರಕ್ಕೆ ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಕುಮಾರಸ್ವಾಮಿ, ಅಕ್ರಮ ಮಾಡಿದ ದೊಡ್ಡ ದೊಡ್ಡ ಕಟ್ಟಡಗಳನ್ನು ಒಡೆಯುವ ಧೈರ್ಯ ಇವರಿಗೆ ಇಲ್ಲ. ಆದರೆ ಬಡವರು ಕಟ್ಟಿಕೊಂಡ ಮನೆಗಳನ್ನು ಮಳೆ–ಚಳಿಯ ನಡುವೆ ಒಡೆದು ಹಾಕಿದ್ದಾರೆ. ಈ ಸರ್ಕಾರಕ್ಕೆ ಮನುಷ್ಯತ್ವ ಇದೆಯಾ? ಎಂದು ಕಿಡಿ ಕಾರಿದರು.

## ನಾನು BJP ಸೇರ್ತೇನೆ ಎನ್ನುವವರೇ JDSಗೆ ಹೋಗ್ತಾರೆ: ರಮೇಶ ಜಾರಕಿಹೊಳಿಗೆ ಲಕ್ಷ್ಮಣ್ ಸವದಿ ಟಾಂಗ್



ಬೆಳಗಾವಿ: ನಾನು ಬಿಜೆಪಿಗೆ ಬರುತ್ತೇನೆ ಎಂದು ಯಾರು ಹೇಳುತ್ತಿದ್ದಾರೋ, ಅವರೇ ಬಿಜೆಪಿಯಲ್ಲಿ ಬಹಳ ದಿನ ಇರುವುದಿಲ್ಲ. ಶೀಘ್ರದಲ್ಲೇ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಳ್ಳಲಿದ್ದಾರೆಂದು ಹೇಳುವ ಮೂಲಕ ಗೋಕಾಕ್ ಶಾಸಕ ರಮೇಶ ಜಾರಕಿಹೊಳಿಗೆ ಅಥಣಿ ಶಾಸಕ ಲಕ್ಷ್ಮಣ ಸವದಿ ಪರೋಕ್ಷವಾಗಿ ತಿರುಗೇಟು ಕೊಟ್ಟಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಮ್ಮ ಪಕ್ಷದಲ್ಲಿ ಯಾವುದೇ ಗೊಂದಲವಿಲ್ಲ. ಎಲ್ಲದಕ್ಕೂ ಕೆಲವೇ ದಿನಗಳಲ್ಲಿ ತೆರೆ ಬೀಳಲಿದೆ. ಆದರೆ, ದುರುದ್ದೇಶದಿಂದ ಕೆಲವರು ಕೆಲಸ ಇಲ್ಲದ್ದಕ್ಕೇ ಏನೇನೋ ಚರ್ಚೆ ಮಾಡುತ್ತಿದ್ದಾರೆ. ಇದಕ್ಕೆಲ್ಲಾ ತಲೆಕೆಡಿಸಿಕೊಳ್ಳುವುದಿಲ್ಲ. ಅವರೇ ಬೇರೆ ಪಕ್ಷಕ್ಕೆ ಹೋಗುವ ಚಿಂತೆಯಲ್ಲಿದ್ದಾರೆ. ನಾನು ಬೇರೆ ಪಕ್ಷಕ್ಕೆ ಹೋಗುತ್ತೇನೆ ಎಂದು ಎಲ್ಲೂ ಹೇಳಿಲ್ಲ. ಹೀಗಿರುವಾಗ ನನ್ನ ಬಗ್ಗೆ ಅನುಮಾನಗಳೇಕೆ ಎಂದು ಪ್ರಶ್ನಿಸಿದರು.

ಕೆಲವರು ಕೆಲಸ ಇಲ್ಲದ್ದಕ್ಕೆ ತಲೆಬುಡ ಇಲ್ಲದ ಚರ್ಚೆ ಮಾಡುತ್ತಿದ್ದಾರೆ. ಅವರ ಪ್ರಶ್ನೆಗಳಿಗೆ ನಾನು ಉತ್ತರಿಸುವ ಅವಶ್ಯಕತೆ ಇಲ್ಲ. ನನಗೆ ಮೈತುಂಬಾ ಕೆಲಸಗಳಿವೆ. ನನ್ನ ಕ್ಷೇತ್ರದಲ್ಲಿ ಸಾಕಷ್ಟು ಕೆಲಸ ಮಾಡಬೇಕಿದೆ. ಹೀಗಾಗಿ ಬೇರೆಯವರು ಆಡುವ ಮಾತುಗಳಿಗೆ, ಆರೋಪಗಳಿಗೆ ನಾನು ತಲೆ ಕೆಡಿಸಿಕೊಳ್ಳುವುದಿಲ್ಲ ಎಂದು ತಿರುಗೇಟು ನೀಡಿದರು.

ಕಾಂಗ್ರೆಸ್ ಶಾಸಕರು ದೆಹಲಿ ಪ್ರವಾಸ ಕೈಗೊಂಡಿದ್ದು, ನೀವು ದೆಹಲಿಗೆ ಹೋಗುತ್ತಿದ್ದೀರಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿ, ನನಗೆ ಇಲ್ಲಿಯವರೆಗೆ ದೆಹಲಿಯಿಂದ ಯಾವುದೇ ರೀತಿ ಬುಲಾವ್ ಅಥವಾ ಕರೆ ಬಂದಿಲ್ಲ. ಕರೆ ಬಂದ ಸಂದರ್ಭದಲ್ಲಿ ನಿಮಗೆ ಹೇಳಿಯೇ ದೆಹಲಿಗೆ ಹೋಗುತ್ತೇನೆ ಎಂದು ತಿಳಿಸಿದರು.

ನಾಳೆ ನನ್ನ ಕ್ಷೇತ್ರದಲ್ಲಿ ಕುಡಿಯುವ ನೀರು ಸೇರಿ ಅನೇಕ ಕಾಮಗಾರಿಗಳಿಗೆ ಭೂಮಿ ಪೂಜೆ ಕೆಲಸ ಇದೆ. ಪೂರ್ವ ನಿಯೋಜಿತ ಕಾರ್ಯಕ್ರಮಗಳು ಇರುವುದರಿಂದ ದೆಹಲಿಗೆ ಹೋಗುತ್ತಿಲ್ಲ. ಅಂತಿಮವಾಗಿ ಎಲ್ಲವನ್ನೂ ವರಿಷ್ಠರು, ಮುಖ್ಯಮಂತ್ರಿಗಳು, ಕೆಪಿಸಿಸಿ ಅಧ್ಯಕ್ಷರು, ರಾಷ್ಟ್ರೀಯ ನಾಯಕರು ತೀರ್ಮಾನ ಮಾಡುತ್ತಾರೆ. ಯಾವುದೇ ಗೊಂದಲ ಇಲ್ಲ. ಎಲ್ಲಾ ಗೊಂದಲಗಳಿಗೆ ಕೆಲವೇ ದಿನಗಳಲ್ಲಿ ತೆರೆ ಬೀಳಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

## 'ಅಕ್ಕಪಡೆ' ವತಿಯಿಂದ ವಿಶೇಷ ಜಾಗೃತಿ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಅಥಣಿ:** ಮಹಿಳೆಯರ ಸುರಕ್ಷತೆ ಹಾಗೂ ಸಾರ್ವಜನಿಕರಲ್ಲಿ ಕಾನೂನು ಅರಿವು ಮೂಡಿಸುವ ಉದ್ದೇಶದಿಂದ ಪಟ್ಟಣದ ಬಸ್ ನಿಲ್ದಾಣದಲ್ಲಿ 'ಅಕ್ಕಪಡೆ' (ಮಹಿಳಾ ಪೊಲೀಸ್ ತಂಡದ) ವತಿಯಿಂದ ವಿಶೇಷ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಮಹಿಳೆಯರ ಮೇಲೆ ನಡೆಯುತ್ತಿರುವ ಕಿರುಕುಳ ತಡೆಗಟ್ಟಲು ಮತ್ತು ಪ್ರಯಾಣಿಕರಲ್ಲಿ ಜಾಗೃತಿ ಮೂಡಿಸಲು ನಿಟ್ಟಿನಲ್ಲಿ ಈ ಅಭಿಯಾನವನ್ನು ನಡೆಸಲಾಯಿತು.

ತುರ್ತು ಸಂದರ್ಭಗಳಲ್ಲಿ ಮಹಿಳೆಯರು ನೆರವು ಪಡೆಯಲು 112 ಸಹಾಯವಾಣಿಗೆ ಕರೆ ಮಾಡುವಂತೆ ಸಾರ್ವಜನಿಕರಿಗೆ ಮಾಹಿತಿಯನ್ನು ನೀಡಿದರು.

ಪ್ರಯಾಣಿಕರ ಲಗೇಜುಗಳ ಭದ್ರತೆ, ಅಪರಿಚಿತರು ನೀಡುವ ತಿಂಡಿ–ತಿನಿಸುಗಳನ್ನು ಸೇವಿಸನೆ. ಅನುಮಾನಾಸ್ಪದ ವ್ಯಕ್ತಿಗಳು ಓಡಾಟ. ಕಂಡುಬಂದಲ್ಲಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡುವಂತೆ ಸಾರ್ವಜನಿಕರಿಗೆ ಮನವಿಯನ್ನ ಅಕ್ಕಾ ಪಡೆಯ ತಂಡದ ಸದಸ್ಯರು ಮಾಡಿದ್ರು.

ಮಹಿಳೆಯರು ಮತ್ತು ಮಕ್ಕಳು ಸಾರ್ವಜನಿಕ ಸ್ಥಳಗಳಲ್ಲಿ ನಿರ್ಭಯವಾಗಿ ಸಂಚರಿಸಬೇಕು. ಯಾವುದೇ ತೊಂದರೆಯಾದಲ್ಲಿ ಸಂಕೋಚ ಪಡದೆ ಅಕ್ಕಪಡೆಯನ್ನು ಅಥವಾ ಹತ್ತಿರದ ಪೊಲೀಸ್ ಸಿಬ್ಬಂದಿಯನ್ನು ಸಂಪರ್ಕಿಸಬೇಕು,ಎಂದು ತಂಡದ ಅಧಿಕಾರಿಗಳು ಈ ಸಂದರ್ಭದಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಾರಿಗೆ ಸಂಸ್ಥೆಯ ಅಧಿಕಾರಿಗಳು ಹಾಗೂ ನೂರಾರು ಪ್ರಯಾಣಿಕರು ಉಪಸ್ಥಿತರಿದ್ದರು

ಅಕ್ಕಪಡೆಯ ಸದಸ್ಯರಾದ ಭೀಮಪ್ಪ ಉಗಾರೆ, ಜ್ಯೋತಿ ಬೆಕ್ಕೇರಿ,ಕವಿತಾ ಕಾಡಗೌಡರ ತಂಡದಿಂದ ಈ ಅರಿವು ಮೂಡಿಸುವ ಕಾರ್ಯಕ್ರಮ ಜರಗಿತು.



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಸದಸ್ಯರು ನವನಗರದ ಈಶ್ವರ ದೇವಸ್ಥಾನದಲ್ಲಿ ಕಲ್ಯಾಣದಿಂದ ಉಳವಿಗೆ ಪ್ರವಚನ ನೀಡಲು ಆಗಮಿಸಿದ್ದ ಪ್ರವಚನದ ಮೂಲಕ ಬಸವ ತತ್ವ ಚಿಂತನೆಗಳನ್ನು ಬಿತ್ತರಿಸುತ್ತಿರುವ, ಖ್ಯಾತ ಪ್ರವಚನಕಾರರಾದ ಮುಮ್ಮಿಗಟ್ಟಿಯ ಶಿವಯೋಗಾಶ್ರಮ ಹಾಗೂ ಬೆಳ್ಳೇರಿಯಶ್ರೀ ಶಿವಾನಂದಮಠದ ಪರಮ ಪೂಜ್ಯರು, ನಿಸರ್ಗ ಚಿಕಿತ್ಸಾ ತಜ್ಞರಾದ ಪೂಜ್ಯಶ್ರೀ ಡಾ ಬಸವಾನಂದ ಸ್ವಾಮೀಜಿಯವರ ಪ್ರವಚನದ ಸುಸಂದರ್ಭದಲ್ಲಿ ಪೂಜ್ಯ ಸ್ವಾಮಿಜಿಯವರನ್ನು ಭೇಟಿ ಮಾಡಿ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಮಾಲಾರ್ಪಣೆ ಮಾಡಿ ಶ್ರೀಗಳ ದರ್ಶನ ಆಶೀರ್ವಾದ ಪಡೆದು ಆತ್ಮೀಯವಾಗಿ ಶ್ರದ್ಧಾ ಭಕ್ತಿಯಿಂದ ನಮನಗಳನ್ನು ಸಲ್ಲಿಸಿದರು.

ಶ್ರೀಗಳ ಆಶೀರ್ವಾದ ಸದಾವಕಾಲ ಭಕ್ತರ ಮೇಲೆ ಇರಲಿ ಎಂದು ಆಶಯ ವ್ಯಕ್ತಪಡಿಸಿದರು. ಉದ್ಯಮಿಗಳು, ಬಸವ ತತ್ವ ನಿಷ್ಠರಾದ ಶಂಕರ ಕೋಳಿವಾಡ, ಚಂದ್ರಶೇಖರ ತೊನ್ನಿ, ಹಿರಿಯರಾದ ಪ್ರಭು ರೋಣದ, ವಕೀಲರಾದ ಕೆ. ಎಸ್. ಕೊರಿಶೆಟ್ಟರ್, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಹಿರಿಯರಾದ ಬಿ ಜಿ ಹೊಸಗೌಡರ, ಲಿಂಗಾಯತ ಧರ್ಮ ಮಹಾಸಭಾದ ತಾಲೂಕಾಧ್ಯಕ್ಷ ಮನೋಹರ ಜಮಖಂಡಿ, ನವನಗರ ನಿವಾಸಿಗಳ ಹಿತೋದ್ದಾರಕ ಸಂಘದ ಬಸವರಾಜ ಪಾಟೀಲ , ಮಹಾರುದ್ರ ಪಟ್ಟಣಶೆಟ್ಟಿ , ಚೇತನ, ಮುಂತಾದವರು ಇದ್ದರು.

## ಪಿ.ಯು.ಸಿಯಲ್ಲಿ ಸಾಧನೆಗೈದ ವಿದ್ಯಾಪೋಷಕದ ಪ್ರತಿಭೆಗಳು



**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡದ ವಿದ್ಯಾಪೋಷಕ ಸಂಸ್ಥೆ 2025–26ಸಾಲಿನಲ್ಲಿ ದ್ವಿತೀಯ ಪಿ.ಯು.ಸಿ ಅಭ್ಯಾಸ ಮಾಡುತ್ತಿರುವ ಧಾರವಾಡ ಮತ್ತು ಗದಗ ಜಿಲ್ಲೆಯ ಕೃಷಿಕಾರ್ಮಿಕರು/ ಮನೆಗೆಲಸ / ಕ್ಷೌರಿಕ / ಕಟ್ಟಡ ಕೆಲಸ ಮಾಡುವವರು /ಬಡಿಗತನ /ಕಮ್ಮಾರಿಕೆ /ಟೈಲರಿಂಗ್ ಮುಂತಾದ ಕೆಲಸಗಳಲ್ಲಿ ತೊಡಗಿರುವ ಕುಟುಂಬದಿಂದ ಬಂದ ಅನೇಕ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಧನಸಹಾಯ, ಪುಸ್ತಕ ಮತ್ತು ತರಬೇತಿ ಶಿಬಿರಗಳನ್ನು ಆಯೋಜಿಸಿ ಮಾರ್ಗದರ್ಶನ ನೀಡಲಾಗಿತ್ತು. ಈ ವಿದ್ಯಾರ್ಥಿಗಳ ಪೈಕಿ ಪ್ರತಿಭಾನ್ವಿತ 19ವಿದ್ಯಾರ್ಥಿಗಳು 2025–26ನೇ ಶೈಕ್ಷಣಿಕ ಸಾಲಿನಲ್ಲಿ ದ್ವಿತೀಯ ಪಿ.ಯು.ಸಿ.ಯಲ್ಲಿ ಗಣನೀಯ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದು ಸಾಧನೆಗೈದ್ದಾರೆ.

ಅನು ಜಾಧವ್–96.5%(ವಾಣಿಜ್ಯ), ಶಾರದ ನೆಣಕ್ಕಿ–95.83%(ವಾಣಿಜ್ಯ), ಭವಾನಿ ರಡ್ಡರ್–95.16%(ವಿಜ್ಞಾನ), ದೀಕ್ಷಿತಾ ಅಂಚಟಗೆರಿ–95.16% (ವಾಣಿಜ್ಯ), ಸಾಕ್ಷಿ ಬಡಿಗನ್ನವರ–95.16% (ವಾಣಿಜ್ಯ), ಸುಮಾ ಗರಗ–95.3%(ವಿಜ್ಞಾನ), ಚಂದನಾ ಪಾಟೀಲ್–94.6% (ವಿಜ್ಞಾನ),ಮೇಘಾ ಚಿಕ್ಕನಗೌಡ್ರ–94.3%(ವಿಜ್ಞಾನ), ಆಕಾಶ ಜುಲ್ಪಿ–93.8%(ವಾಣಿಜ್ಯ), ಚನ್ನಮ್ಮ ಸಂದಿಮನಿ–93.3%, (ವಾಣಿಜ್ಯ),ಪ್ರಣೀತ್ ಕಲಘಟಗಿ–92.16% (ವಿಜ್ಞಾನ), ಸೌಜನ್ಯ ತುರುಮರಿ–90.6%(ವಿಜ್ಞಾನ), ರುಚಿತಾ ಶಿಲಾರೆ–90%(ವಿಜ್ಞಾನ), ಅದಿತಿ ದೇಶಪಾಂಡೆ–91.5% (ವಿಜ್ಞಾನ), ಪಲ್ಲವಿ ಕುಂಬಾರ್–90.16%(ವಿಜ್ಞಾನ), ಭಾವನಾ ಬಡಗರು 92.16%(ವಿಜ್ಞಾನ), ಅಮೋಘಾ ಹಿರೇಮಠ–90.6% (ವಿಜ್ಞಾನ), ಸೌಮ್ಯ ಪಾಟೀಲ್–94.5% (ವಾಣಿಜ್ಯ), ಬಸವಣ್ಣೆವ್ವ ಉಪ್ಪಾರ್–92.6%(ವಾಣಿಜ್ಯ)ದಲ್ಲಿ ಸಾಧನೆ ತೋರಿದ ಎಲ್ಲ ವಿದ್ಯಾರ್ಥಿಗಳಿಗೆ ವಿದ್ಯಾಪೋಷಕ ಸಂಸ್ಥೆ ಶುಭಹಾರೈಸಿದೆ.

**

**ಡಾ.ಪ್ರಭು ಗಂಜಿಹಾಳ**
**ಮೊ–9448775346**

## ಮಕ್ಕಳ ಮೇಲೆ ಬೀದಿ ನಾಯಿಗಳ ದಾಳಿ; ನಾಲ್ವರಿಗೆ ಗಾಯ

ಜಮಖಂಡಿ: ನಗರದ ಶಿಕ್ಕಲಗಾರ ಗಲ್ಲಿಯಲ್ಲಿ ಮಕ್ಕಳು ಆಟವಾಡುತ್ತಿದ್ದ ವೇಳೆ ಬೀದಿ ನಾಯಿ ಏಕಾಏಕಿ ದಾಳಿ ನಡೆಸಿದ ಪರಿಣಾಮ ನಾಲ್ವರು ಮಕ್ಕಳು ಸಣ್ಣಪುಟ್ಟ ಗಾಯಗಳಿಗೆ ಒಳಗಾದ ಘಟನೆ ನಡೆದಿದೆ.

ಗಾಯಾಳು ಮಕ್ಕಳನ್ನು ಮಾನಂದಾ ಸಂಜು ಬಜಂತ್ರಿ (6 ವರ್ಷ), ಅರವಿಂದ ರಾಜನಾ ಶಿಕ್ಕಲಗಾರ (2.5 ವರ್ಷ), ಶಕ್ತಿ ಲಕ್ಷ್ಮಣ ಪೂಜಾರಿ (4 ವರ್ಷ) ಹಾಗೂ ಚೌಡಯ್ಯ ನಗರದ ಆತಿಫಾ ಅಪರಾದ್ (3 ವರ್ಷ) ಎಂದು ಗುರುತಿಸಲಾಗಿದೆ.

ಗಾಯಗೊಂಡ ಮಕ್ಕಳನ್ನು ತಕ್ಷಣವೇ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಮಕ್ಕಳ ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ತಿಳಿದು ಬಂದಿದೆ.

ನಗರದಲ್ಲಿ ಇತ್ತೀಚೆಗೆ ಬೀದಿ ನಾಯಿಗಳ ದಾಳಿ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರಲ್ಲಿ ಆತಂಕ ಮನೆಮಾಡಿದೆ. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಬೀದಿ ನಾಯಿಗಳ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

# ಲೆಕ್ಕಾ ಕೊಡಿ.. ಹೈ ಡ್ರಾಮಾ; ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದಿಂದ ವಚನಾನಂದ ಶ್ರೀ ಉಚ್ಚಾಟನೆ



**ಬೆಳಗಾವಿ ವಾರ್ತೆ ದಾವಣಗೆರೆ:** ಪ್ರಮುಖ ಬೆಳವಣಿಗೆಯಲ್ಲಿ ಹರಿಹರ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದಿಂದ ಖ್ಯಾತ ಯೋಗಗುರು ವಚನಾನಂದ ಶ್ರೀ ಅವರನ್ನು ಉಚ್ಚಾಟನೆ ಮಾಡಲಾಗಿದೆ ಎಂದು ತಿಳಿದುಬಂದಿದೆ.

ಕೆಲವ ವಾರಗಳ ಹಿಂದಷ್ಟೇ ಕೂಡಲಸಂಗಮದಲ್ಲಿರುವ ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಸಮಾಜ ಟ್ರಸ್ಟ್ ನಡೆಸುವ ಪೀಠದಿಂದ ಬಸವ ಜಯಮೃತ್ಯುಂಜಯ ಸ್ವಾಮೀಜಿ ಅವರನ್ನು ಉಚ್ಚಾಟನೆ ಮಾಡಲಾಗಿತ್ತು. ಲೈಂಗಿಕ ಕಿರುಕುಳ ಆರೋಪದ ಮೇರೆಗೆ ಅವರನ್ನು ಪದಚ್ಯುತಗೊಳಿಸಲಾಗಿತ್ತು. ಇದೀಗ ಹರಿಹರ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದಿಂದ ವಚನಾನಂದ ಶ್ರೀಗಳನ್ನು ಕೂಡ ಅಮಾನತು ಮಾಡಲಾಗಿದೆ.

ಮೂಲಗಳ ಪ್ರಕಾರ ಹರಿಹರ ತಾಲೂಕಿನ ಹನಗವಾಡಿ ಬಳಿಯ ಗುರುಪೀಠದಲ್ಲಿ ನಡೆದ ಧರ್ಮದರ್ಶಿ ಸಭೆಯಲ್ಲಿ 12 ಜನ ಧರ್ಮದರ್ಶಿಗಳಿಂದ ಅಂತಿಮ ನಿರ್ಧಾರ ಕೈಗೊಳ್ಳಲಾಗಿದ್ದು, ಹರಿಹರ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದಿಂದ ವಚನಾನಂದ ಶ್ರೀ ಅವರನ್ನು ಪದಚ್ಯುತಿ ಮಾಡಿರುವ ಬಗ್ಗೆ ಹರಿಹರ ಪಂಚಮಸಾಲಿ ಪೀಠದ ಟ್ರಸ್ಟಿ ಬಸವರಾಜ ದಿಂಡೂರ ಅವರು ಮಾಧ್ಯಮಗಳಿಗೆ ಮಾಹಿತಿ ನೀಡಿದ್ದಾರೆ.

ಹರಿಹರ ಪಂಚಮಸಾಲಿ ಪೀಠದಲ್ಲಿ ಟ್ರಸ್ಟಿ ಬಸವರಾಜ ದಿಂಡೂರ ಅವರು ನೀಡಿರುವ ಮಾಹಿತಿ ಪ್ರಕಾರ, ವಚನಾನಂದ ಶ್ರೀಗೆ ಶ್ವಾಸಪೀಠ ಅಥವಾ ಹರಿಹರ ಪಂಚಮಸಾಲಿ ಪೀಠದ ಪೈಕಿ ಎರಡರಲ್ಲಿ ಒಂದನ್ನು ಆಯ್ಕೆ ಮಾಡುವಂತೆ ಹೇಳಿದ್ದರಂತೆ. ಆದರೆ ಇದಕ್ಕೆ ತದ್ವಿರುದ್ಧವಾಗಿ ನಡೆದುಕೊಂಡ ಕಾರಣವಾಗಿ ವಚನಾನಂದ ಶ್ರೀಗಳನ್ನು ಪದಚ್ಯುತಿ ಮಾಡಿದ್ದೇವೆ ಎಂದ ಬಸವರಾಜ ದಿಂಡೂರ ಹೇಳಿದ್ದಾರೆ.

**ವೈಯುಕ್ತಿಕ ನಿರ್ಧಾರ ಅಲ್ಲ.. ಸಮಾಜದ ನಿರ್ಧಾರ:** ಇದೇ ವೇಳೆ ಈ ನಿರ್ಧಾರವನ್ನು ಸಮರ್ಥಿಸಿಕೊಂಡಿರುವ ಟ್ರಸ್ಟಿ ಜಿ.ಪಿ.ಪಾಟೀಲ್ ಅವರು, ಟ್ರಸ್ಟಿಗಳ ಸಭೆ ಬಳಿಕ ಮಾತನಾಡಿ, ಇದು ಟ್ರಸ್ಟ್ ನ ವೈಯಕ್ತಿಕ ನಿರ್ಧಾರ ಅಲ್ಲ, ಸಮಾಜದ ನಿರ್ಧಾರ. ಸ್ವಾಮೀಜಿಗಳು ನಮ್ಮನ್ನು ಒಳಗೆ ಕರೆಯೋಕೆ ತಯಾರಿಲ್ಲ, ಶ್ವಾಸಗುರು ಪೀಠ ಬಿಡದೇ ಇರೋದು ಮುಖ್ಯ ಕಾರಣ. ಉಳಿದ ಕಾರಣ ಏನು ಎಂಬುದನ್ನು ಸದ್ಯದಲ್ಲೇ ಹೇಳುತ್ತೇವೆ ಎಂದು ಹೇಳಿದರು.

**ಪ್ರತಿಕ್ರಿಯೆ ನೀಡದ ಶ್ರೀಗಳು**

ಇನ್ನು ಹರಿಹರ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದಿಂದ ತನ್ನನ್ನು ಉಚ್ಚಾಟನೆ ಮಾಡಿರುವ ಬಗ್ಗೆ ವಚನಾನಂದ ಶ್ರೀ ಪ್ರತಿಕ್ರಿಯೆ ನೀಡಿಲ್ಲ.

# ರಾಜ್ಯದಲ್ಲಿ ರಣ ಬಿಸಿಲು: 35 ಡಿಗ್ರಿ ತಲುಪಿದ ತಾಪಮಾನ, ಮಳೆ ಮುನ್ಸೂಚನೆ ಇಲ್ಲ ಎಂದ IMD



ಬೆಂಗಳೂರು: ಬೆಂಗಳೂರು ಸೇರಿದಂತೆ ಕರ್ನಾಟಕದ ಹಲವು ಭಾಗಗಳಲ್ಲಿ ಬಿಸಿಲಿನ ತೀವ್ರತೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ತಕ್ಷಣದ ಮಳೆ ಪರಿಹಾರ ಸಿಗುವ ಸಾಧ್ಯತೆ ಕಡಿಮೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ನಗರದಲ್ಲಿ ಗರಿಷ್ಠ ತಾಪಮಾನ ಸುಮಾರು 35 ಡಿಗ್ರಿ ಸೆಲ್ಸಿಯಸ್ ತಲುಪಿದ್ದು, ಕನಿಷ್ಠ ತಾಪಮಾನವೂ 24 ಡಿಗ್ರಿ ಮಟ್ಟದಲ್ಲೇ ಉಳಿದಿದೆ. ಈ ಹವಾಮಾನ ಇನ್ನೂ ಕೆಲವು ದಿನಗಳವರೆಗೆ ಮುಂದುವರಿಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಬೆಂಗಳೂರಿನಲ್ಲಿ ಬೆಳಗಿನ ವೇಳೆಯಲ್ಲಿ ಮೋಡ ಕವಿದ ವಾತಾವರಣ ಕಾಣಿಸಿಕೊಳ್ಳುವ ಸಾಧ್ಯತೆ ಇದ್ದರೂ, ಮಳೆಯಾಗಿ ಪರಿವರ್ತನೆಯಾಗುವ ಲಕ್ಷಣಗಳು ಕಾಣುತ್ತಿಲ್ಲ. ಇದಕ್ಕೆ ಪ್ರಮುಖ ಕಾರಣವೆಂದರೆ ಭೂಭಾಗದ ಮೇಲೆ ಸುಮಾರು 3 ಕಿಲೋಮೀಟರ್ ಎತ್ತರದಲ್ಲಿ ನಿರ್ಮಾಣವಾಗಿರುವ ಆಂಟಿ-ಸೈಕ್ಲೋನಿಕ್ ವ್ಯವಸ್ಥೆ. ಈ ವ್ಯವಸ್ಥೆ ಮೋಡಗಳ ವಿಕಸನವನ್ನು ತಡೆಯುವುದರಿಂದ ಮಳೆಯಾಗಲು ಅಗತ್ಯವಾದ ವಾತಾವರಣ ಉಂಟಾಗುತ್ತಿಲ್ಲ. ಪರಿಣಾಮವಾಗಿ, ಮಳೆ ತರಬಲ್ಲ ಮೋಡಗಳು ರೂಪುಗೊಳ್ಳದೇ ತಾಪಮಾನ ಹೆಚ್ಚಾಗುತ್ತಿದೆ ಎಂದು ತಿಳಿಸಿದೆ.

ಇದೇ ವೇಳೆ ದಕ್ಷಿಣ-ಪೂರ್ವ ದಿಕ್ಕಿನಿಂದ ಬೀಸುತ್ತಿರುವ ಗಾಳಿಗಳು ಬಿಸಿಯನ್ನು ಹೆಚ್ಚಿಸುವುದರ ಜೊತೆಗೆ ಮಧ್ಯಮ ಮಟ್ಟದ ಆರ್ದ್ರತೆಯನ್ನು ತರಿಸುತ್ತಿವೆ. ಇದರಿಂದ ಹಗಲು ವೇಳೆ ಬಿಸಿಲಿನ ತೀವ್ರತೆ ಹೆಚ್ಚಾಗುತ್ತಿದ್ದು, ರಾತ್ರಿ ಸಮಯದಲ್ಲೂ ತಂಪಿನ ಅನುಭವ ಕಡಿಮೆಯಾಗಿದೆ. ಈ ಕಾರಣದಿಂದ ನಗರ ನಿವಾಸಿಗಳಿಗೆ ಉಷ್ಣತೆ ಕಾಟ ಹೆಚ್ಚಾಗಿದೆ. ರಾಜ್ಯದ ಇತರ ಭಾಗಗಳಲ್ಲಿಯೂ ಇದೇ ರೀತಿಯ ಪರಿಸ್ಥಿತಿ ಕಂಡುಬರುತ್ತಿದೆ. ವಿಶೇಷವಾಗಿ ಉತ್ತರ ಕರ್ನಾಟಕದ ಕಲಬುರಗಿ ಸೇರಿದಂತೆ ಕೆಲವು ಜಿಲ್ಲೆಗಳಲ್ಲಿ ತಾಪಮಾನ 40 ಡಿಗ್ರಿ ಸೆಲ್ಸಿಯಸ್ ತಲುಪಿದೆ. ಆದಾಗ್ಯೂ, ಹವಾಮಾನ ಇಲಾಖೆ ಈ ತಾಪಮಾನ ಸಹಜವಾಗಿದ್ದು, ಅಸಾಮಾನ್ಯ ಹವಾಮಾನ ಬದಲಾವಣೆಯ ಸೂಚನೆ ಅಲ್ಲ ಎಂದು ಹೇಳಿದೆ. ಇನ್ನು ಕರಾವಳಿ ಕರ್ನಾಟಕದಲ್ಲಿ ತಾಪಮಾನ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಎನ್ನಲಾಗುತ್ತಿದ್ದು. ಆರ್ದ್ರತೆ (ಹ್ಯೂಮಿಡಿಟಿ) ಕಾರಣದಿಂದ ತಾಪಮಾನ ಇರಿಕೆಯಾಗಲಿದೆ. ಆರ್ದ್ರತೆಯು ಹಗಲಿನ ವೇಳೆ ತೇವಾಂಶ 50 ಶೇಕಡಾ ಮೀರಬಹುದಾದರೆ, ಸಂಜೆ ವೇಳೆಗೆ ಅದು 70–80 ಶೇಕಡಾ ಮಟ್ಟಕ್ಕೆ ಏರಲಿದೆ. ಇದರಿಂದ ಉಷ್ಣತೆ ಹೆಚ್ಚು ಅನುಭವವಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಈ ಹಿನ್ನೆಲೆಯಲ್ಲಿ ಕರಾವಳಿ ಪ್ರದೇಶಗಳಿಗೆ ಮುಂದಿನ ಮೂರು ದಿನಗಳ ಕಾಲ ಎಚ್ಚರಿಕೆ ನೀಡಲಾಗಿದೆ. ವಿಶೇಷವಾಗಿ ಮೀನುಗಾರರು ಹಾಗೂ ಹೊರಾಂಗಣ ಕೆಲಸ ಮಾಡುವವರು ಎಚ್ಚರಿಕೆಯಿಂದ ಇರಬೇಕು ಎಂದು ಸೂಚಿಸಲಾಗಿದೆ.

ರಾಜ್ಯದ ಬಹುತೇಕ ಭಾಗಗಳಲ್ಲಿ ಹೆಚ್ಚಿನ ತಾಪಮಾನ ವಾತಾವರಣ ಮುಂದುವರಿಯಲಿದ್ದು, ಮಳೆಯ ಲಕ್ಷಣಗಳು ಕಡಿಮೆಯೇ ಇವೆ. ಆದರೆ, ಪಶ್ಚಿಮ ಘಟ್ಟ ಪ್ರದೇಶಗಳಲ್ಲಿ ಕೆಲವೆಡೆ ತುಂತುರು ಮಳೆಯಾಗುವ ಸಾಧ್ಯತೆ ಇದೆ ಎಂದು ಐಎಂಡಿ ಮಾಹಿತಿ ನೀಡಿದೆ.

# ಮಂಗಳೂರು: ದ್ವಿತೀಯ PUC ಪರೀಕ್ಷೆಯಲ್ಲಿ ತಂದೆ-ಮಗ ಇಬ್ಬರು ತೇರ್ಗಡೆ!

**ಬೆಳಗಾವಿ ವಾರ್ತೆ ಮಂಗಳೂರು:** ವಿದ್ಯೆಗೆ ವಯಸ್ಸಿನ ಅಂತರವಿಲ್ಲ. ಕಲಿಯುವ ಆಸಕ್ತಿಯಿದ್ದರೆ ಯಾವ ವಯಸ್ಸಿನಲ್ಲಿಯೂ ಕಲಿಯ ಬಹುದು ಎಂಬುದಕ್ಕೆ ಮಂಗಳೂರಿನ ತಂದೆ-ಮಗ ಸಾಕ್ಷಿಯಾಗಿದ್ದಾರೆ. ಕೊಲ್ಯ ದ 57 ವರ್ಷದ ವ್ಯಕ್ತಿಯೊಬ್ಬರು ತಮ್ಮ ಮಗ ಕ್ಷಿತಿಜ್ ರಾಜ್ ಅವರೊಂದಿಗೆ ದ್ವಿತೀ ಯ ಪಿಯುಸಿ ಬೋರ್ಡ್ ಪರೀಕ್ಷೆಯಲ್ಲಿ ಶೇ.52 ರಷ್ಟು ಅಂಕಗಳನ್ನು ಪಡೆದು ಯಶಸ್ವಿಯಾಗಿ ತೇರ್ಗಡೆಯಾಗಿದ್ದಾರೆ.

ಚಿಟ್ ಫಂಡ್ ವ್ಯವಹಾರದಲ್ಲಿ ಕೆಲಸ ಮಾಡುತ್ತಿರುವ ಮೋಹನ್ ರಾಜ್ ಸುಮಾರು ನಾಲ್ಕು ದಶಕಗಳ ಹಿಂದೆ ಪ್ರಥಮ ಪಿಯುಸಿ ಮುಗಿಸಿದ್ದರು. ಆದರೆ, ಹಣಕಾಸಿನ ತೊಂದರೆ ಮತ್ತು ಕೌಟುಂಬಿಕ ಜವಾಬ್ದಾರಿಗಳಿಂದಾಗಿ ಅವರು ಆ ಸಮ ಯದಲ್ಲಿ ಶಿಕ್ಷಣವನ್ನು ಮುಂದುವರಿಸಲು ಸಾಧ್ಯವಾಗಿರಲಿಲ್ಲ. ತನ್ನ ಅಧ್ಯಯನವನ್ನು ಪೂರ್ಣಗೊಳಿ ಸದ ಪಶ್ಚಾತ್ತಾಪ ಅನೇಕ ವರ್ಷಗಳಿಂದ ಅವರನ್ನು ಕಾಡುತಿತ್ತು. ಅವರ ಮಗ ಪಿಯುಸಿ ಪರೀಕ್ಷೆಗೆ ತಯಾರಿ ಆರಂಭಿಸಿ ದಾಗ ತನ್ನ ದೀರ್ಘಾವಧಿಯ ಶೈಕ್ಷಣಿಕ ಗುರಿ ಸಾಧಿಸಲು ಮತ್ತೊಂದು ಅವಕಾಶ ಪಡೆಯಲು ನಿರ್ಧರಿಸಿದರು. ಒಟ್ಟಿಗೆ ಓದುವುದರಿಂದ ಮಗನಿಗೆ ಪ್ರೋತ್ಸಾಹ ಮತ್ತು ಬೆಂಬಲ ಸಿಗುತ್ತದೆ ಎಂಬುದು ಅವರ ನಂಬಿಕೆಯಾಗಿತ್ತು.

ಮಗನು ಪರೀಕ್ಷೆಗೆ ತಯಾರಿ ನಡೆಸು ತ್ತಿರುವುದನ್ನು ನೋಡಿ ನನಗೆ ಸ್ಫೂರ್ತಿ ಯಾಯಿತು. ನನಗಾಗಿ ಮಾತ್ರವಲ್ಲದೆ ಆತನನ್ನು ಪ್ರೇರೇಪಿಸಲು ದ್ವಿತೀಯ ಪಿಯುಸಿಗೆ ಹಾಜರಾಗಲು ನಿರ್ಧರಿಸಿದೆ ಎಂದು ಮೋಹನ್ ಹೇಳಿದ ರು. ಕೆಲಸ ಮತ್ತು ಅಧ್ಯಯನವನ್ನು ನಿಭಾ ಯಿಸುತ್ತಾ, ಮೋಹನ್ ತೊಕ್ಕೊ ಟ್ಟುವಿನ ಮಠದಲ್ಲಿ ಟ್ಯುಟೋರಿಯಲ್ ಮತ್ತು ಕಂಪ್ಯೂಟರ್ ಸೆಂಟರ್‌ಗೆ ಸೇರಿಕೊಂಡರು.

ಅಲ್ಲಿ ಅವರು ಪ್ರತಿದಿನ ಬೆಳಿಗ್ಗೆ 8 ರಿಂದ 11 ರವರೆಗೆ ಮತ್ತು ಮಧ್ಯಾಹ್ನ 2.30 ರಿಂದ ಸಂಜೆ 4 ರವರೆಗೆ ತರಗತಿಗಳಿಗೆ ಹಾಜರಾಗಿದ್ದರು. ಅವರ



ಮಕ್ಕಳಾದ ಪೃಥ್ವಿ, ಪ್ರಕೃತಿ ಮತ್ತು ಕ್ಷಿತಿಜ್ ರಾಜ್ ತಂದೆಗೆ ನೆರವಾಗಿದ್ದಾರೆ.

40 ವರ್ಷಗಳ ನಂತರ ಶಿಕ್ಷಣಕ್ಕೆ ಮರಳುವುದು ಸುಲಭವಲ್ಲ ಎಂಬುದನ್ನು ಒಪ್ಪಿಕೊಂಡ ಮೋಹನ್ ರಾಜ್, ಬರವಣಿಗೆ ಮತ್ತು ಅಧ್ಯಯನದ ಸಂಪರ್ಕ ಕಳೆದುಕೊಂಡ್ದೆ. ಹೀಗಾಗಿ ಸಮಯಕ್ಕೆ ಪೇಪರ್‌ಗಳನ್ನು ಪೂರ್ಣಗೊಳಿಸುವುದು ಸವಾಲಾಗಿತ್ತು" ಎಂದು ಅವರು ಹೇಳಿದರು. ಕಲಾ ವಿಭಾಗದಲ್ಲಿ ಶೇ.52ರಷ್ಟು ಅಂಕ ಗಳಿಸಿ ಮೊದಲ ಪ್ರಯತ್ನದಲ್ಲೇ ಎಲ್ಲ ವಿಷ ಯಗಳಲ್ಲಿ ಉತ್ತೀರ್ಣರಾದ ಮೋಹನ್ ರಾಜ್ ಅವರ ಶ್ರಮಕ್ಕೆ ತಕ್ಕ ಫಲ ದೊರೆ ಯಿತು. ಈ ಮಧ್ಯೆ ಅವರ ಮಗ ವಾಣಿಜ್ಯ ವಿಭಾಗದಲ್ಲಿ ಶೇ. 67 ರಷ್ಟು ಅಂಕಗಳನ್ನು ಗಳಿಸಿದ್ದಾರೆ. ಮೋಹನ್ ಈಗ ಪತ್ರವ್ಯ ವಹಾರದ ಮೂಲಕ ಕಾನೂ ನು ಅಧ್ಯಯ ನ ಮಾಡುವ ತನ್ನ ಬಹುಕಾ ಲದ ಕನ ಸನ್ನು ಮುಂದುವರಿಸಲು ಬಯಸಿದ್ದಾರೆ.

# ಖರ್ಗೆ ಪ್ರಚೋದನಕಾರಿ ಭಾಷಣ: ಕಾನೂನು ಕ್ರಮ ಕೈಗೊಳ್ಳಲು ಗೋಕಾಕ ಬಿಜೆಪಿ ಯುವ ಮೋರ್ಚಾ ನಗರ ಮಂಡಲ ವತಿಯಿಂದ ಮನವಿ



**ಬೆಳಗಾವಿ ವಾರ್ತೆ ಗೋಕಾಕ:** ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಇತ್ತೀಚೆಗೆ ಆಸ್ಸಾಂ ಚುನಾವಣೆಯ ಪ್ರಚಾರ ಸಭೆಯಲ್ಲಿ ರಾಷ್ಟ್ರ ಭಕ್ತರಾದ ಆರ್.ಎಸ್.ಎಸ್ ಕಾರ್ಯಕರ್ತರು ಮತ್ತು ಬಿಜೆಪಿ ಕಾರ್ಯಕರ್ತರನ್ನು ವಿಷಸರ್ಪಕ್ಕೆ ಹೋಲಿಸಿದ್ದಲ್ಲದೇ, ಕುರಾನ್ ದಲ್ಲಿ ಬರೆದಿದೆ ನಮಾಜ್ ಮಾಡುವ ಸಂದರ್ಭದಲ್ಲಿ ವಿಷಸರ್ಪ ಕಂಡರೆ ಅದನ್ನು ಕೊಲ್ಲಬೇಕು, ಅದೇ ರೀತಿ ಆರ್.ಎಸ್.ಎಸ್ ಕಾರ್ಯಕರ್ತರು ಮತ್ತು ಬಿಜೆಪಿ ಕಾರ್ಯಕರ್ತರನ್ನು ವಿಷಸರ್ಪವಿದ್ದಂತೆ ಅವರನ್ನು ಕೊಲ್ಲಬೇಕು ಎಂದು ಪ್ರಚೋದನಕಾರಿ ಭಾಷಣ ಮಾಡಿದ್ದಕ್ಕೆ ಬಿಜೆಪಿ ಯುವ ಮೋರ್ಚಾ ನಗರ ಮಂಡಲ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಆರ್.ಎಸ್.ಎಸ್ ಕಾರ್ಯಕರ್ತರು ಮತ್ತು ಬಿಜೆಪಿಯು ಕೋಟ್ಯಾಂತರ ಕಾರ್ಯಕರ್ತರನ್ನು ಹೊಂದಿದ್ದು ದೇಶದ ತುರ್ತು ಸಂದರ್ಭಗಳಲ್ಲಿ ರಾಷ್ಟ್ರ ಸೇವೆಗಾಗಿ ಅನೇಕ ಸಂಘ ಪರಿವಾರದ ಸೇವಕರು ತಮ್ಮ ಅಮೂಲ್ಯ ಜೀವನವನ್ನು ದೇಶಕ್ಕಾಗಿ ಮುಡಿಪಾಗಿಟ್ಟಿದ್ದಾರೆ.ಆರ್.ಎಸ್.ಎಸ್ ಮತ್ತು ಬಿಜೆಪಿ ಕಾರ್ಯಕರ್ತರ ಬಗ್ಗೆ ಹಗುರವಾಗಿ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಗೋಕಾಕ ಸಿಪಿಐ ಸುರೇಶಬಾಬು.ಆರ್.ಬಿ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಬಿಜೆಪಿ ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮಣ್ಣವರ, ಯುವ ಮೋರ್ಚಾ ನಗರ ಅಧ್ಯಕ್ಷ ಈರಣ್ಣ ಅಂಬಲಿ, ಪ್ರಭು ರಾವಳೋಜಿ, ರಾಜೇಶ್ವರಿ ವಡೇಯರ,ಕೆ.ಎಸ್.ಸುಭಂಜಿ, ಮೋಹನ ವಾಳವೇಕರ, ದರ್ಶನ ಗುಡ್ಡಾಕಾರ, ಗೋಪಾಲ ಗೋಣಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಏ. 18ರಂದು ಕೊಪ್ಪಳದಲ್ಲಿ ವಾಕ್ ಇನ್ ಇಂಟರ್‌ವ್ಯೂವ್

**ಬೆಳಗಾವಿ ವಾರ್ತೆ ಕೊಪ್ಪಳ:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ವಾಕ್ ಇನ್ ಇಂಟರ್‌ವ್ಯೂವನ್ನು ಏಪ್ರಿಲ್ 18 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ರ ವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಪಿಯುಸಿ ಮತ್ತು ಯಾವುದೇ ಪದವಿ ಪಾಸ್ ಅಥವಾ ಫೇಲ್ ವಿದ್ಯಾಭ್ಯಾಸ ಹೊಂದಿರುವ ಅಭ್ಯರ್ಥಿಗಳು ಈ ವಾಕ್ ಇನ್ ಇಂಟರ್‌ವ್ಯೂವನ್ನು ನಲ್ಲಿ ಭಾಗವಹಿಸಬಹುದಾಗಿದೆ. ಆಸಕ್ತ 18 ರಿಂದ 30 ವರ್ಷ ನಿರುದ್ಯೋಗಿ ಯುವಕ ಮತ್ತು ಯುವತಿಯರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳ 2 ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ(ರೆಸ್ಯೂಮ್) ಹಾಗೂ ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟವ್ಯೂವನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸುವಂತೆ ಕೊಪ್ಪಳ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆಯರಿಗೆ ಅವಕಾಶ ಕೊಟ್ಟರೆ, ಸಮಾಜಕ್ಕೆ ಹೆಚ್ಚಿನ ಕೊಡುಗೆ

**ಬೆಳಗಾವಿ ವಾರ್ತೆ ಗದಗ:** ಮಹಿಳೆಯರು ಹೆಚ್ಚಿನ ಪ್ರತಿಭೆ ಮತ್ತು ಸಮಗ್ರತೆಯನ್ನು ಹೊಂದಿರುತ್ತಾರೆ. ಅವರಿಗೆ ಅವಕಾಶಗಳನ್ನು ಕೊಟ್ಟರೆ ಸಮಾಜಕ್ಕೆ ಅರ್ಥಪೂರ್ಣ ಕೊಡುಗೆ ಗಳನ್ನು ನೀಡುತ್ತಾರೆಂದು ಬಿಜೆಪಿ ಸಂಸದ ಮತ್ತು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಹೇಳಿದ್ದಾರೆ.

ಮುಂಡರಗಿ ತಾಲ್ಲೂಕಿನಲ್ಲಿ ಪ್ರಥಮ ಯಾರ್ಂಕ್ ಮತ್ತು ಗದಗ ಜಿಲ್ಲೆಯಲ್ಲಿ ಮೂರನೇ ಯಾರ್ಂಕ್ ಪಡೆದ ಕಲಕೇರಿ ಯ ಶ್ರೀ ಎಂ.ಬಿ. ಪಾಟೀಲ್ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯು ವಿದ್ಯಾರ್ಥಿನಿ ಮಂಜುಳಾ ಹನುಮಂತಪ್ಪ ಹುಲಕಣ್ಣವರ್ ಅವರನ್ನು ಸನ್ಮಾನಿಸಿದರು.

ಬಳಿಕ ಮಾತನಾಡಿದ ಅವರು, ಮಹಿಳೆಯರಿಗೆ ಅವಕಾಶ ನೀಡಿದರೆ ಅವರು ಸಮಾಜದಲ್ಲಿ ದೊಡ್ಡ ಮಟ್ಟದ ಕೊಡುಗೆ ನೀಡಬಹುದು ಎಂದು ಅಭಿಪ್ರಾಯಪಟ್ಟರು.


ಮಹಿಳೆಯರಲ್ಲಿ ಅಪಾರ ಪ್ರತಿಭೆ, ಪ್ರಾಮಾಣಿಕತೆ ಇರುತ್ತದೆ. ಅವರಿಗೆ ಸೂಕ್ತ ಅವಕಾಶಗಳು ದೊರೆತರೆ, ಅವರು ಸಮಾಜವನ್ನು ಮತ್ತಷ್ಟು ಮುನ್ನಡೆಸುವ ಶಕ್ತಿ ಹೊಂದಿದ್ದಾರೆ ಎಂದು ಹೇಳಿದರು.

ರಾಜ್ಯೋತ್ಸವ ಪ್ರಶಸ್ತಿ ರಾಜ್ಯದ ಅತ್ಯುನ್ನತ ಗೌರವಗಳಲ್ಲಿ ಒಂದಾಗಿದ್ದರೂ, ಮಂಜುಳಾ ಪಡೆದಿರುವ ಗೌರವವೂ ಅಷ್ಟೇ ವಿಶೇಷವಾಗಿದೆ ಎಂದು ಅವರು ಹೇಳಿದರು.

ಇದೇ ವೇಳೆ ದೇಶದಲ್ಲಿ ಅನೇಕ ಮಹಿಳೆ ಯರ ಪ್ರತಿಭೆ ಹೊರಬರದೆ ಉಳಿದಿರು ವುದನ್ನು ಉಲ್ಲೇಖಿಸಿದ ಅವರು, ಹಿಂದಿನ ಪೀಳಿಗೆಯ ಮಹಿಳೆಯರಿಗೆ ಹೆಚ್ಚಿನ ಅವಕಾಶಗಳು ದೊರಕಿದ್ದರೆ ಸಮಾಜ ಇನ್ನಷ್ಟು ಅಭಿವೃದ್ಧಿಯಾಗುತ್ತಿತ್ತು ಎಂದು ಅಭಿಪ್ರಾಯಪಟ್ಟರು.

ಸಾಮಾಜಿಕ ಸುಧಾರಕ ಬಸವಣ್ಣ ಅವರ ಆದರ್ಶಗಳನ್ನು ಉಲ್ಲೇಖಿಸಿದ ಅವರು, ಲಿಂಗಭೇದವಿಲ್ಲದ ಸಮಾನತೆಯ ಅಗತ್ಯತೆಯನ್ನು ಒತ್ತಿ ಹೇಳಿದರು. ಜೊತೆಗೆ ಅಕ್ಕ ಮಹಾದೇವಿ ಅವರ ವಚನ ಸಾಹಿತ್ಯವ ನ್ನು ಪ್ರಶಂಸಿಸಿ, ಅವರ ಆಲೋಚನೆಗಳು ಇಂದಿಗೂ ಪ್ರೇರಣೆಯಾಗಿವೆ ಎಂದು ಹೇಳಿದರು.

ಕಾರ್ಯಕ್ರಮದ ವೇಳೆ ತಾಯಿಯ ಬಗ್ಗೆ ಮಾತನಾಡಿದ ಬೊಮ್ಮಾಯಿ ಅವರು ಭಾವುಕರಾದರು. ತಾಯಿ ತಂದೆಗಿಂತಲೂ ಶ್ರೇಷ್ಠಳಾಗಿದ್ದು, ಗರ್ಭದಲ್ಲಿಯೇ ಮಕ್ಕಳಿಗೆ ಮೌಲ್ಯಗಳನ್ನು ತುಂಬುತ್ತಾಳೆ ಎಂದು ಹೇಳಿದರು.



ತನ್ನ ತಾಯಿ ಗಣಿತ ಮತ್ತು ಇಂಗ್ಲಿಷ್‌ನಲ್ಲಿ ಮೇಲುಗೈ ಹೊಂದಿದ್ದರೂ, ಏಳನೇ ತರಗತಿಗೆ ಶಿಕ್ಷಣ ನಿಲ್ಲಿಸಬೇಕಾಯಿತು. ಆದರೂ ನಂತರ ಹಲವು ಮಕ್ಕಳಿಗೆ ಶಿಕ್ಷಣದಲ್ಲಿ ಸಹಾಯ ಮಾಡಿದರು ಎಂದು ಸ್ಮರಿಸಿದರು.

ಮಂಜುಳಾ ಅವರ ಸಾಧನೆಯನ್ನು ಶ್ಲಾಘಿಸಿದ ಅವರು. ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಶೇ.95 ಅಂಕ ಪಡೆದು, ವಿವಾಹದ ನಂತರವೂ ಪಿಯುಸಿ ದ್ವಿತೀಯ ವರ್ಷದ ಪರೀಕ್ಷೆಯಲ್ಲಿ ತಾಲೂಕು ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದಿರುವುದು ಅತ್ಯಂತ ಪ್ರಶಂಸನೀಯ ಸಾಧನೆ ಎಂದು ಹೇಳಿದರು. ಅವರು ಕೆಎಎಸ್ ಮುಂತಾದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆಯಬೇಕು ಎಂದು ಸಲಹೆ ನೀಡಿದ ಅವರು, ತಮ್ಮ ಟ್ರಸ್ಟ್‌ನಿಂದ ಶಿಕ್ಷಣ ವೆಚ್ಚವನ್ನು ಭರಿಸುವುದಾಗಿ ಭರವಸೆ ನೀಡಿದರು.

ತಾವು ಮುಖ್ಯಮಂತ್ರಿಯಾಗಿದ್ದ ಅವಧಿ ಯಲ್ಲಿ ರೈತರ ಮಕ್ಕಳಿಗೆ ವಿದ್ಯಾರ್ಥಿವೇತನ ಯೋಜನೆ ಜಾರಿಗೊಳಿಸಿ ಸುಮಾರು 11 ಲಕ್ಷ ವಿದ್ಯಾರ್ಥಿಗಳಿಗೆ ಸಹಾಯ ಮಾಡಿರು ವುದನ್ನು ಅವರು ನೆನಪಿಸಿಕೊಂಡರು.

ಮತ್ತೆ ಅವಕಾಶ ದೊರೆತರೆ ಆ ಯೋಜನೆಯನ್ನು ಪುನರಾರಂಭಿಸುವ ಇಚ್ಛೆಯಿದೆ ಎಂದು ಹೇಳಿದರು. ಇಂತಹ ಸಾಧನೆಗಳು ಇತರ ಹುಡುಗಿಯರಿಗೂ ಪ್ರೇರಣೆಯಾಗುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಎಸ್.ಎಸ್. ಪಾಟೀಲ್ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಪಂಚಮಸಾಲಿ ಸಮಾಜದ ವತಿಯಿಂದ ಬೃಹತ್ ಪ್ರತಿಭಟನೆಯ ಎಚ್ಚರಿಕೆ

## ಬಸವಜಯ ಮೃತ್ಯೂಂಜಯ ಸ್ವಾಮಿ ಅವರಿಗೆ ಅವಹೇಳನ ಮಾಡಿದ ವ್ಯಕ್ತಿ ಬಂಧಿಸಲು ಆಗ್ರಹ



**ಬೆಳಗಾವಿ ವಾರ್ತೆ ಮೋಳೆ:** ಪಂಚಮಸಾಲಿ ಸಮಾಜದ ಕೂಡಲಸಂಗಮ ಪೀಠಾಧಿಪತಿ ಬಸವಜಯ ಮೃತ್ಯೂಂಜಯ ಸ್ವಾಮಿಜಿ ಅವರನ್ನು ಅವಹೇಳನ ಮಾಡಿ ಲೈಂಗಿಕ ದೌರ್ಜನ್ಯ ಆರೋಪ ಮಾಡಿರುವ ವ್ಯಕ್ತಿಯನ್ನು ಬಂಧಿಸಬೇಕು ಎಂದು ಒತ್ತಾಯಿಸಿ ಪಂಚಮಸಾಲಿ ಸಮಾಜದ ವತಿಯಿಂದ ಕಾಗವಾಡ ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಗುವುದೆಂದು ಕಾಗವಾಡ ತಾಲೂಕಾ ಪಂಚಮಸಾಲಿ ಸಮಾಜದ ಅಧ್ಯಕ್ಷ ಬಸನಗೌಡ ಪಾಟೀಲ(ಬಮ್ನಾಳ)ಹೇಳಿದರು.

ಅವರು ಇಂದು ಕಾಗವಾಡ ಪಟ್ಟಣ ದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತ ಈ ವಿಷಯ ತಿಳಿಸಿದರು. ಪಂಚಮಸಾಲಿ ಸಮಾಜಕ್ಕೆ 2 ಎ ಮೀಸಲಾತಿ ನೀಡಬೇಕು ಎಂದು ಒತ್ತಾಯಿಸಿ ಸ್ವಾಮಿಜಿಗಳು ಹೋರಾಟ ನಡೆಸುತ್ತಿದ್ದಾರೆ. ಈ ಹೋರಾ ಟಕ್ಕೆ ಇಡೀ ಸಮಾಜ ಬೆಂಬಲ ಸೂಚಿಸಿದೆ. ಆದರೆ ಈ ಹೋರಾಟವನ್ನು ಹತ್ತಿಕ್ಕುವ ಉದ್ದೇಶದಿಂದ ಹುಣಗುಂದ ಶಾಶಕ ವಿಜಯಾನಂದ ಕಾಶಪ್ಪನವರ , ಸ್ವಾಮಿ ಜಿಯವರ ಚಾರಿತ್ರ್ಯವನ್ನು ತೇಜೋವಧೆ ಮಾಡಲು ನಿಂತಿದ್ದಾರೆ. ಶ್ರೀಗಳ ಏಳಿಗೆಯ ನ್ನು ಸಹಿಸದ ವಿಕೃತ ಮನಸ್ಸಿನವರು ಇಲ್ಲ ಸಲ್ಲದ ಆರೋಪ ಮಾಡುತ್ತಿರುವುದು ಸಮಾಜ ಬಾಂಧವರಿಗೆ ತೀವ್ರ ನೋವು ಉಂಟು ಮಾಡಿದೆ ಎಂದರು.

ರಾಜ್ಯದ ಪಂಚಮಸಾಲಿ ಸಮಾಜದ ಬಾಂಧವರ ಧಾರ್ಮಿಕ ಭಾವನೆ ಮತ್ತು ಕೂಡಲಸಂಗಮ ಪೀಠಕ್ಕೆ ಅವಮಾನ ಎಸಗಿದ ದುಷ್ಕರ್ಮಿಗಳಿಗೆ ಕಠಿಣ ಶಿಕ್ಷೆ ನೀಡಬೇಕು.ಬಸವಜಯ ಮೃತ್ಯೂಂಜಯ ಸ್ವಾಮಿಜಿ ಅವರನ್ನು ಮುಗಿಸಿದರೆ ಪಂಚಮಸಾಲಿ ಸಮಾಜದ 2ಎ ಬೇಡಿಕೆ ಹೋರಾಟ ಅತಂತ್ರವಾಗಲಿದೆ ಎಂಬ ಭಾವನೆ ವಿಜಯಾನಂದ ಕಾಶಪ್ಪವರ ಸಹಚರರ ಭಾವನೆಯಾಗಿದೆ.

2ಎ ಮೀಸಲಾತಿಗಾಗಿ ಸ್ವಾಮಿಜಿಯ ವರು ನಿರಂತರ ಹೋರಾಟ ನಡೆಸಿದ್ದಾರೆ. ಇತ್ತೀಚಿನ ಎಲ್ಲಾ ಬೆಳವಣಿಗೆಗಳನ್ನು ಲಿಂಗಾಯತ್ ಪಂಚಮಸಾಲಿ ಸಮಾಜ ಸೂಕ್ಷ್ಮವಾಗಿ ಗಮನಿಸುತ್ತಿದೆ. ಸ್ವಾಮಿಜಿಗೆ ತೊಂದರೆ ಕೊಟ್ಟು ಹೋರಾಟ ಹತ್ತಿಕ್ಕುವ ಷಡ್ಯಂತ್ರ ನಡೆದಿದೆ. ಅದು ಅಸಾಧ್ಯ ಎಂದು ಬಸನಗೌಡ ಪಾಟೀಲ ಹೇಳಿದರು.

# ಬೆಂಗಳೂರಿನ ಪ್ರವಾಹ ಕಾಮಗಾರಿಯನ್ನು ಮೇ 30ರೊಳಗೆ ಮುಗಿಸಿ, ಇಲ್ಲವೇ ಅಮಾನತು ಎದುರಿಸಿ: ಅಧಿಕಾರಿಗಳಿಗೆ ACS ಎಚ್ಚರಿಕೆ



**ಬೆಳಗಾವಿ ವಾರ್ತೆ ಬೆಂಗಳೂರು:** ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಅವರು ಮೇ 30ರೊಳಗೆ ಬಾಕಿ ಇರುವ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು, ಇಲ್ಲವಾದರೆ ಅಮಾನತು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ.

ಯಲಹಂಕದ ಕೇಂದ್ರಿಯ ವಿಹಾರ, ಟಾಟಾ ನಗರ, ಹೆಬ್ಬಾಳ, ಮನ್ಯತಾ ಟೆಕ್ ಪಾರ್ಕ್, ಎಚ್‌ಬಿಆರ್ ಲೇಔಟ್, ಗೆದ್ದಲಹಳ್ಳಿ, ನಾಗವಾರ, ಸಾಯಿ ಲೇಔಟ್ ಮತ್ತು ಸಿಲ್ಕ್ ಬೋರ್ಡ್ ಸೇರಿದಂತೆ ಪ್ರವಾಹ ಸಮಸ್ಯೆ ಇರುವ ಪ್ರದೇಶಗಳನ್ನು ಪರಿಶೀಲಿಸಿದ ನಂತರ ಅಧಿಕಾರಿಗಳಿಗೆ ಆದೇಶ ನೀಡಿದ್ದಾರೆ.

ನಿನ್ನೆ ಬೆಳಗ್ಗೆ ಗ್ರೇಟರ್ ಬೆಂಗಳೂರು ಅಥಾರಿಟಿ (ಉಃಂ) ಮುಖ್ಯ ಆಯುಕ್ತ ಎಂ ಮಹೇಶ್ವರ ರಾವ್ ಅವರೊಂದಿಗೆ ಪರಿಶೀಲನೆ ನಡೆಸಿದ ಗಿರಿನಾಥ್, ಪ್ರವಾಹ ತಡೆಗೆ ಕೈಗೊಳ್ಳಲಾಗುತ್ತಿರುವ ವಿವಿಧ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದರು.

ಕಳೆದ ನಾಲ್ಕು ವರ್ಷಗಳಲ್ಲಿ ಸಾಕಷ್ಟು ಕೆಲಸ ನಡೆದಿದೆ ಮತ್ತು ಬಹುತೇಕ ಪ್ರವಾಹವನ್ನು ತಡೆಯುವ ನಿರೀಕ್ಷೆಯಿದೆ ಎಂದು ಹೇಳಿದರು.

ಎಚ್‌ಬಿಆರ್ ಲೇಔಟ್ ಪರಿಶೀಲನೆ ವೇಳೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (BWSSB) ಇಂಟೇಕ್ ವೆಲ್ ಕಾಮಗಾರಿಯ ವಿಳಂಬದ ಬಗ್ಗೆ ತುಷಾರ್ ಗಿರಿನಾಥ್ ಅಸಮಾಧಾನ ವ್ಯಕ್ತಪಡಿಸಿದರು. ಈ ಕೆಲಸವು ಅವರು ಹಿಂದಿನ ಬಿಬಿಎಂಪಿ ಆಯುಕ್ತರಾಗಿದ್ದ ಸಮಯದಿಂದಲೇ ಬಾಕಿ ಉಳಿದಿದೆ ಎಂದು ತಿಳಿದುಬಂದಿದೆ.

ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ಕಲ್ಲುಗಳ ಇರುವಿಕೆಯಿಂದ ಕಾಮಗಾರಿ ವಿಳಂಬವಾಗಿದೆ ಎಂದು ಎಂಜಿನಿಯರ್ ತಿಳಿಸಿದ್ದಾರೆ. ಅವರು ಅಕ್ಟೋಬರ್ ತನಕ ಸಮಯ ಕೇಳಿದ್ದಾರೆ. ಅಷ್ಟೊರೊಳಗೆ ಪೂರ್ಣಗೊಳಿಸದಿದ್ದರೆ ಅಮಾನತಿಗೆ ಶಿಫಾರಸು ಮಾಡಲಾಗುವುದು ಎಂದರು.

ಕೇಂದ್ರಿಯ ವಿಹಾರ ಅಪಾರ್ಟ್‌ಮೆಂಟ್ ಪ್ರದೇಶ ಮತ್ತು ಕೊಗಿಲು ಜಂಕ್ಷನ್‌ನಲ್ಲಿ ಪ್ರವಾಹ ತಡೆಯಲು ವೆಂಕಟಾಳ ಕೆರೆಯಿಂದ ಜಕ್ಕೂರು ಕೆರೆಗೆ 2.7 ಕಿಮೀ ಉದ್ದದ, 35 ಮೀಟರ್ ಅಗಲದ ಸ್ಟಾರ್ಮ್ ವಾಟರ್ ಡ್ರೇನ್ (ಖಘಆ) ನಿರ್ಮಾಣ ಮಾಡಲಾಗುತ್ತದೆ. ಎರಡೂ ಬದಿಗಳಲ್ಲಿ 30 ಅಡಿ ಅಗಲದ ರಸ್ತೆ ನಿರ್ಮಾಣವಾಗಲಿದೆ. ಮೊದಲ ಹಂತದಲ್ಲಿ 1.5 ಕಿಮೀ ಉದ್ದದ ಖಲಅ ಗೋಡೆ ಹಾಗೂ ಡ್ರೇನ್ ನಿರ್ಮಿಸಲಾಗಿದೆ.

ಟಾಟಾ ನಗರದಲ್ಲಿ ಪ್ರವಾಹ ತಡೆ ಕ್ರಮಗಳ ಬಗ್ಗೆ ಮಾಹಿತಿ ಪಡೆದ ಅವರು, ದೊಡ್ಡಬೊಮ್ಮಸಂದ್ರ ಕೆರೆಯಿಂದ 900 ಮೀಟರ್ ಉದ್ದದ, 20 ಅಡಿ ಅಗಲದ ಸ್ಟಾರ್ಮ್ ವಾಟರ್ ಡ್ರೇನ್ ನಿರ್ಮಾಣ ನಡೆಯುತ್ತಿದೆ ಎಂದು ಹೇಳಿದರು.

ಹೆಬ್ಬಾಳದಲ್ಲಿ 15.90 ಕೋಟಿ ರೂಪಾಯಿ ವೆಚ್ಚದ ಕೆರೆ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದ ಅವರು, 16 ಎಕರೆ ಅಕ್ರಮ ಆಕ್ರಮಣ ತೆರವು ಮಾಡಿದ ನಂತರ ವೆಟ್ಲ್ಯಾಂಡ್ ಮತ್ತು ಇನ್‌ಲೆಟ್ ಕಾಮಗಾರಿಗಳು ಆರಂಭವಾಗಲಿವೆ ಎಂದು ಹೇಳಿದರು. ಹೆಬ್ಬಾಳ ಜಂಕ್ಷನ್ ಕೆಳಭಾಗದಿಂದ ಮಳೆನೀರನ್ನು ಕೆರೆಗೆ ಹರಿಸುವ ವ್ಯವಸ್ಥೆ ರೂಪಿಸಲಾಗುತ್ತಿದೆ ಎಂದರು.

ವಿಮಾನ ನಿಲ್ದಾಣ ದಿಕ್ಕಿನ ಮುಖ್ಯ ರಸ್ತೆಯ ಡೌನ್ ರ್ಯಾಂಪ್, ಸರ್ವಿಸ್ ರಸ್ತೆ ಮತ್ತು ಬಸ್ ನಿಲ್ದಾಣ ಸೇರಿದಂತೆ ನಾಲ್ಕು ನೀರು ನಿಲ್ಲುವ ಸ್ಥಳಗಳಿಗೆ ಶಾಶ್ವತ ಪರಿಹಾರಗಳನ್ನು ಜಾರಿಗೆ ತರಲಾಗಿದೆ ಎಂದು ಹೇಳಿದರು. ತುಮಕೂರು ರಸ್ತೆ ಲೂಪ್ ಡೌನ್ ರ್ಯಾಂಪ್ ಕಾಮಗಾರಿಯನ್ನು 15 ದಿನಗಳಲ್ಲಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಮಾನ್ಯತಾ ಟೆಕ್ ಪಾರ್ಕ್ ಮತ್ತು ವೀರನಪಾಳ್ಯ ಔಟರ್ ರಿಂಗ್ ರಸ್ತೆಯಲ್ಲಿ ನೀರು ನಿಲ್ಲುವ ಸಮಸ್ಯೆಗೆ ಪರಿಹಾರವಾಗಿ ಭೂಸ್ವಾಧೀನ ಪ್ರಕ್ರಿಯೆ ನಡೆಯುತ್ತಿದ್ದು, ಖಾಸಗಿ ವೆಚ್ಚದಲ್ಲಿ ಸ್ಟಾರ್ಮ್ ವಾಟರ್ ಡ್ರೇನ್ ನಿರ್ಮಾಣ ಮಾಡಲಾಗುತ್ತಿದೆ. ಸಿಲ್ಕ್ ಬೋರ್ಡ್ ಜಂಕ್ಷನ್‌ನಲ್ಲಿ ನೀರು ನಿಲ್ಲುವ ಸಮಸ್ಯೆ ನಿವಾರಣೆಗೆ ಕಲ್ವರ್ಟ್ ಕಾಮಗಾರಿ ನಡೆಯುತ್ತಿದ್ದು, ಎತ್ತರವನ್ನು 1.5 ಮೀಟರ್‌ನಿಂದ 3.5 ಮೀಟರ್‌ಗೆ ಹೆಚ್ಚಿಸಲಾಗುತ್ತಿದೆ ಹಾಗೂ ಗ್ರೇಟಿಂಗ್ ಅಳವಡಿಸಲಾಗುತ್ತಿದೆ ಎಂದರು.

ಸಿಲ್ಕ್ ಬೋರ್ಡ್‌ನಿಂದ ರಗ್ಗಿಗುಡ್ಡದವರೆಗೆ ನಿರ್ಮಿಸಿರುವ ಡಬಲ್ ಡೆಕ್ಕರ್ ಫ್ಲೈಓವರ್‌ನಲ್ಲಿ ಸಂಚಾರ ಸುಗಮವಾಗಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಜೊತೆಗೆ, ಪಿಲ್ಲರ್ ಕಾಮಗಾರಿ ಪೂರ್ಣಗೊಂಡ ಪ್ರದೇಶಗಳಲ್ಲಿ ಬ್ಯಾರಿಕೇಡ್‌ಗಳನ್ನು ತೆರವುಗೊಳಿಸಿ ರಸ್ತೆ ಅಭಿವೃದ್ಧಿಪಡಿಸಲು ಸೂಚಿಸಿದರು.

# ಚಿಕ್ಕ ಮಾದಿನಾಳ ಗ್ರಾಮದಲ್ಲಿ ಮಕ್ಕಳ ಹಕ್ಕುಗಳು, ಕಾನೂನುಗಳು & ಸುರಕ್ಷತೆಯ ಜಾಗೃತಿ

**ಬೆಳಗಾವಿ ವಾರ್ತೆ ಕೊಪ್ಪಳ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ,ಕೊಪ್ಪಳ ಹಾಗೂ ಗ್ರಾಮ ಪಂಚಾಯತ್, ಚಿಕ್ಕ ಮಾದಿನಾಳ, ಇವರುಗಳ ಸಂಯುಕ್ತಾಶ್ರಯದಲಿ ಇವರುಗಳ ಸಂಯುಕ್ತಾಶ್ರಯದಲ್ಲಿ ಕನಕಗಿರಿ ತಾಲೂಕಿನ ಚಿಕ್ಕ ಮಾದಿನಾಳ ಗ್ರಾಮದ ಶ್ರೀಮರಿಯಮ್ಮ ದೇವಿ ದೇವಸ್ಥಾನದ ಆವರಣದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಕ್ಕಳ ಹಕ್ಕುಗಳು, ಕಾನೂನುಗಳು ಮತ್ತು ಮಕ್ಕಳ ಸುರಕ್ಷತೆ ಕುರಿತು ಜಾಗೃತಿ" ಮೂಡಿಸಲಾಯಿತು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿಂಧು ಅಂಗಡಿ ಅವರು ಮಾತನಾಡಿ, ಮಕ್ಕಳ ಮೇಲಿನ ಲೈಂಗಿಕ ಅಪರಾಧಗಳನ್ನು ತಡೆಗಟ್ಟಲು ಸರಕಾರವು ವಿವಿಧ ಕಾನೂನುಗಳನ್ನು ಜಾರಿಯಲ್ಲಿ ತಂದಿರುತ್ತದೆ. ಅವುಗಳಲ್ಲಿ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012 ತಿದ್ದುಪಡಿ–2019 ಪ್ರಮುಖವಾದದ್ದು, ಈ ಕಾಯ್ದೆಯನ್ವಯ 18 ವರ್ಷದೊಳಗಿನ ಮಕ್ಕಳ ಮೇಲಿನ ಬೇಧಕ ಲೈಂಗಿಕ ಹಲ್ಲೆಗೆ ಕನಿಷ್ಠ 20 ವರ್ಷಗಳಿಂದ ಅಜೀವ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿದೆ. ಲೈಂಗಿಕ ಕಿರುಕುಳ ಅಂದರೆ ಮಕ್ಕಳಿಗೆ ಶಾಬ್ದಿಕ, ಅಂಗಿಕ, ಭಾಷಿಕ ಹಾಗೂ ಲಿಖಿತವಾಗಿ ಅವರ ಘನತೆಗೆ ಧಕ್ಕೆ ಉಂಟುಮಾಡಬಹುದಾದ ಯಾವುದೇ ಈ ರೀತಿಯ ಕೃತ್ಯಗಳಿಗೆ 7 ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿದೆ. ಈ ರೀತಿಯ ಕೃತ್ಯಗಳಿಗೆ ಸಹಾಯ, ಪ್ರೋತ್ಸಾಹ ಮತ್ತು ಪ್ರಯತ್ನಪಟ್ಟವರಿಗೂ ಅಷ್ಟೇ ಪ್ರಮಾಣದ ಶಿಕ್ಷೆಯನ್ನು ವಿಧಿಸಬಹುದಾಗಿದೆ. ಸಾಮಾಜಿಕ ಜಾಲತಾಣ ಅಥವಾ ಇತರೆ ಮಾಧ್ಯಮಗಳ ಪ್ರಭಾವದಿಂದ ಪ್ರೀತಿ, ಪ್ರೇಮದ ಹೆಸರಿನಲ್ಲಿ ಮಕ್ಕಳು ತಿಳಿದೊ, ತಿಳಿಯದೆಯೋ ಈ ಕಾಯ್ದೆಯಲ್ಲಿ ಸಿಲುಕುತ್ತಿದ್ದಾರೆ ಎಂದರು.



ಅಲ್ಲದೇ ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ಮದುವೆಯನ್ನು ಮಾಡಿದಂತವರು, ಭಾಗಿಯಾದವರು, ಪ್ರೋತ್ಸಾಹಿಸಿದವರು ಬಾಲ್ಯವಿವಾಹ ನಿಷೇಧ ಕಾಯ್ದೆ ಮತ್ತು ಈ ಕಾಯ್ದೆಯಲ್ಲಿ ಸಿಲುಕಿ ಜೈಲು ಶಿಕ್ಷೆಯನ್ನು ಅನುಭವಿಸುತ್ತಿದ್ದಾರೆ. ಆದ್ದರಿಂದ ಗ್ರಾಮ ಮಟ್ಟದಲ್ಲಿ ವಿವಿಧ ರೀತಿಯಲ್ಲಿ ಜಾಗೃತಿಯನ್ನು ಮೂಡಿಸಲು ಗ್ರಾಮ ಮಟ್ಟದ "ಮಕ್ಕಳ ರಕ್ಷಣಾ ಸಮಿತಿ"ಯಲ್ಲಿ ಚರ್ಚಿಸಿ, "ಮಕ್ಕಳ ಹಕ್ಕುಗಳು, ಕಾನೂನುಗಳ ಮತ್ತು ಮಕ್ಕಳ ಸುರಕ್ಷತೆ ಕುರಿತು" ಸಮುದಾಯಗಳಲ್ಲಿ ಜಾಗೃತಿಯನ್ನು ಮೂಡಿಸಿ, ತನ್ಮೂಲಕ ಮಕ್ಕಳ ಮೇಲಿನ ಲೈಂಗಿಕ ಹಲ್ಲೆ, ಬಾಲ್ಯವಿವಾಹಗಳನ್ನು ತಡೆದು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸುವಂತೆ ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಲೀಗಲ್ ಕಂ ಪ್ರೊಬೇಷನ್ ಆಫೀಸರ್ ಶಿವಲೀಲಾ ವನ್ನೂರು ಅವರು ಮಾತನಾಡಿ, ತಾಯಿ ಮರಣ, ಶಿಶು ಮರಣ, ಅಪೌಷ್ಠಿಕ ಮಕ್ಕಳ ಜನನ ನಿರ್ಮೂಲನೆಗಾಗಿ ಸರಕಾರವು ಬಾಲ್ಯವಿವಾಹ ನಿಷೇಧ ಕಾಯ್ದೆಯನ್ನು ಜಾರಿಗೊಳಿಸಿದೆ. ಅದರನ್ವಯ 18 ವರ್ಷದೊಳಿನ ಹೆಣ್ಣು ಮಗುವಿಗೆ ಮತ್ತು 21 ವರ್ಷದೊಳಗಿನ ಗಂಡು ಮಗುವಿಗೆ ವಿವಾಹವನ್ನು ಮಾಡುವುದನ್ನು ನಿಷೇಧಿಸಿದೆ. ರಾಜ್ಯವನ್ನು ಬಾಲ್ಯವಿವಾಹ ಮುಕ್ತ ರಾಜ್ಯವನ್ನಾಗಿಸಲು ಕರ್ನಾಟಕ ರಾಜ್ಯ ಸರಕಾರವು ಬಾಲ್ಯ ವಿವಾಹ ನಿಷೇಧ ಕಾಯ್ದೆಯ ತಿದ್ದುಪಡಿಯನ್ನು ತಂದಿದ್ದು, ಅದರನ್ವಯ ರಾಜ್ಯದಲ್ಲಿ ಬಾಲ್ಯವಿವಾಹಗಳು ಅಸಿಂಧು ವಿವಾಹಗಳಾಗಿವೆ. ಬಾಲ್ಯವಿವಾಹವನ್ನು ಮಾಡುವವರು, ಭಾಗವಹಿಸುವವರು, ಆಯೋಜಿಸುವವರು ಎಲ್ಲರಿಗೂ ಕನಿಷ್ಠ 1 ವರ್ಷದಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆಯನ್ನು ವಿಧಿಸಬಹುದಾಗಿದೆ. ಆದ್ದರಿಂದ ಯಾರು ಸಹ ಬಾಲ್ಯವಿವಾಹಗಳನ್ನು ಮಾಡಬಾರದು. ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸಿ ಎಂದು ತಿಳಿಸಿದರು.

ಚಿಕ್ಕ ಮಾದಿನಾಳ ಗ್ರಾಮ ಪಂಚಾಯತನ್ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಬಸವರಾಜ ಸಂಕನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಸಮೂಹ ಸಂಪನ್ಮೂಲ ಅಧಿಕಾರಿಗಳಾದ ವಿನಾಯಕ, ಮುಸಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಅಂಜುಮ ತಾಜ್, ಕನಕಗಿರಿ ಹೆಡ್ ಕಾನ್ಸಟೇಬಲ್ ಬೈಲಪ್ಪ, ಕನಕಗಿರಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯ ಅಂಗನವಾಡಿ ಮೇಲ್ವಿಚಾರಕಿ ಚಂದ್ರಕಲಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರವಿಕುಮಾರ ಪವಾರ ಪ್ರಸ್ತಾವಿಕವಾಗಿ ಮಾತನಾಡಿದರು. ರಮೇಶ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

# ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವ: ಪೂರ್ವಭಾವಿ ಸಭೆ

## ಸಾರ್ವಜನಿಕರಿಗೆ ತೊಂದರೆಯಾಗದಂತೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ: ಡಾ.ಸುರೇಶ ಬಿ.ಇಟ್ನಾಳ



**ಬೆಳಗಾವಿ ವಾರ್ತೆ ಕೊಪ್ಪಳ:** ಮೇ 10 ರಿಂದ 14 ರವರೆಗೆ ಜಿಲ್ಲೆಯ ಹುಲಿಗಿಯಲ್ಲಿ ನಡೆಯುವ ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವಕ್ಕೆ ಲಕ್ಷಾಂತರ ಭಕ್ತರು, ಸಾರ್ವಜನಿಕರು ಪಾಲ್ಗೊಳ್ಳಲಿದ್ದು, ಅವರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಎಲ್ಲ ಅಗತ್ಯ ಸೌಲಭ್ಯಗಳನ್ನು ಒದಗಿಸಿ, ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮೇ 10 ರಿಂದ 14 ರವರೆಗೆ ಹುಲಿಗಿ ಗ್ರಾಮದಲ್ಲಿ ನಡೆಯಲಿರುವ ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವದ ಅಂಗವಾಗಿ ಧಾರ್ಮಿಕ ಮತ್ತು ದತ್ತಿ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

5 ದಿನಗಳ ಜಾತ್ರಾ ಮಹೋತ್ಸವದಲ್ಲಿ, ಮುಖ್ಯವಾಗಿ ಮೇ 11 ರಂದು ನಡೆಯಲಿರುವ ಮಹಾರಥೋತ್ಸವದಲ್ಲಿ ಲಕ್ಷಾಂತರ ಭಕ್ತರು, ಸಾರ್ವಜನಿಕರು ಪಾಲ್ಗೊಳ್ಳುವುದರಿಂದ ಸ್ವಚ್ಚತೆ ಮತ್ತು ಸುರಕ್ಷತೆ ಕಡೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಗ್ರಾಮದ ಪ್ರತಿ ರಸ್ತೆ, ದೇವಾಲಯದ ಆವರಣ, ಸುತ್ತಲಿನ ಪ್ರದೇಶವನ್ನು ಸ್ವಚ್ಛಗೊಳಿಸಬೇಕು. ಬೇಸಿಗೆ ಸಮಯವಾದ್ದರಿಂದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ದೇವಸ್ಥಾನ ಮತ್ತು ಆವರಣವನ್ನು, ಗ್ರಾಮವನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಬೇಕು. ಸಾರ್ವಜನಿಕರ ವಿಶ್ರಾಂತಿ ಗೃಹ, ತಂಗುದಾಣಗಳನ್ನು, ಗ್ರಾಮದಲ್ಲಿನ ಎಲ್ಲ ರಸ್ತೆ, ಚರಂಡಿಗಳನ್ನು ಸ್ವಚ್ಛಗೊಳಿಸಬೇಕು. ನೀರು ಪೂರೈಸುವ ಎಲ್ಲ ಪೈಪ್‌ಲೈನ್‌ಗಳನ್ನು, ಒಎಚ್‌ಟಿಗಳನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ದುರಸ್ಥಿಗೊಳಿಸಬೇಕು. ಮೊಬೈಲ್ ಟಾಯ್ಲೆಟ್‌ಗಳ ವ್ಯವಸ್ಥೆ ಕಲ್ಪಿಸಬೇಕು ಎಂದು ಸಂಬಂಧಿಸಿದ ಪಿಡಿಒ ಹಾಗೂ ದೇವಸ್ಥಾನದ ಪ್ರಾಧಿಕಾರದ ಕಾರ್ಯದರ್ಶಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆಯನ್ನು ನೀಡಿದರು.

ದೇವಸ್ಥಾನದ ಆವರಣ ಮತ್ತು ಸುತ್ತಲಿನ ಪ್ರದೇಶದಲ್ಲಿ ಪ್ರಾಣಿ ಬಲಿ ನಿಷೇಧವನ್ನು ಕಡ್ಡಾಯವಾಗಿ ಜಾರಿಗೊಳಿಸಬೇಕು ಮತ್ತು ಈ ಬಗ್ಗೆ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು. ಪ್ರಾಣಿ ಬಲಿ ನೀಡದಂತೆ ಸಾರ್ವಜನಿಕರಿಗೆ ಸೂಕ್ತ ಜಾಗೃತಿ ಮೂಡಿಸಬೇಕು. ಪಶು ಪಾಲನಾ ಇಲಾಖೆಯಿಂದ ನಿಗದಿತ ಸ್ಥಳಗಳಲ್ಲಿ ಚೆಕ್‌ಪೋಸ್ಟ್ ಸ್ಥಾಪಿಸಬೇಕು. ಹುಲಿಗಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಎಲ್ಲ ಸಂಪರ್ಕ ರಸ್ತೆಗಳನ್ನು ಪರಿಶೀಲಿಸಿ, ದುರಸ್ಥಿಗೊಳಿಸಬೇಕು. ಬೇರೆ ಬೇರೆ ರಾಜ್ಯಗಳಿಂದಲೂ ಭಕ್ತರು ಆಗಮಿಸಲಿದ್ದು, ಸೂಕ್ತ ಮಾರ್ಗ ಸೂಚಕ ಫಲಕಗಳನ್ನು, ನೀರು, ಶೌಚಾಲಯ, ವಿಶ್ರಾಂತಿ ಗೃಹಗಳ ಸೂಚಕ ಫಲಕಗಳನ್ನು ಅಳವಡಿಸಬೇಕು. ವಾಹನ ದಟ್ಟನೆ ನಿರ್ವಹಣೆಗೆ ಸೂಕ್ತ ಪಾರ್ಕಿಂಗ್ ಸೌಲಭ್ಯ ಒದಗಿಸಬೇಕು. ಕಟ್ಟುನಿಟ್ಟಿನ ಪೊಲೀಸ್ ಬಂದೋಬಸ್ತ್ ಒದಗಿಸಬೇಕು. ಜಾತ್ರಾ ಮಾಹೋತ್ಸವದಲ್ಲಿ ಮದ್ಯ ಮಾರಾಟ ನಿಷೇಧಿಲಾಗುವುದು. ಅಬಕಾರಿ ಇಲಾಖೆಯವರು ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಆರೋಗ್ಯ ಇಲಾಖೆಯಿಂದ ತಾತ್ಕಾಲಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಬೇಕು. ತಜ್ಞ ವೈದ್ಯರು, ಶುಶ್ರೂಷಕರು, ಸಿಬ್ಬಂದಿಗಳೊಂದಿಗೆ ಅಗತ್ಯ ವೈದ್ಯಕೀಯ ಸೌಲಭ್ಯ, ಅಂಬುಲೆನ್ಸ್ ಒದಗಿಸಬೇಕು. ಬೇಸಿಗೆ ತೀವ್ರವಾಗಿದ್ದು, ಹೆಚ್ಚಿನ ಪ್ರಮಾಣದ ಒಆರ್‌ಎಸ್ ಅನ್ನು ಒದಗಿಸಬೇಕು. ಆರೋಗ್ಯ ಕೇಂದ್ರಗಳಲ್ಲಿ ನಿರಂತರ ವೈದ್ಯಕೀಯ ಸಿಬ್ಬಂದಿ ಇರುವಂತೆ ಕ್ರಮ ಕೈಗೊಳ್ಳಬೇಕು ಎಂದು ಆರೋಗ್ಯಾಧಿಕಾರಿಗೆ ಸೂಚಿಸಿದರು. ಅಗ್ನಿಶಾಮಕ ಇಲಾಖೆ ವತಿಯಿಂದ ಅಗ್ನಿಶಾಮಕ ವಾಹನವನ್ನು ಒದಗಿಸಬೇಕು. ಸೂಕ್ಷ್ಮ ಪ್ರದೇಶಗಳಲ್ಲಿ ಲಭ್ಯವಿರುವಂತೆ ಎಚ್ಚರಿಕೆ ವಹಿಸಬೇಕು. ಜಾತ್ರೆ ಸಂದರ್ಭ ದೇವಸ್ಥಾನದ ಪಕ್ಕದಲ್ಲಿನ ನದಿಗೆ ನೀರು ಬಿಡುಗಡೆ ಮಾಡಲಿದ್ದು, ನದಿ ತೀರ ಪ್ರದೇಶದಲ್ಲಿ ಭಕ್ತರು ಸ್ನಾನಕ್ಕೆ ತೆರಳುವುದರಿಂದ ಯಾವುದೇ ಅಪಾಯ ಜರುಗದಂತೆ ಸೂಕ್ತ ಭದ್ರತೆ ಕಲ್ಪಿಸಬೇಕು. ಅಗತ್ಯ ಮುನ್ನೆಚ್ಚರಿಕಾ ಫಲಕಗಳನ್ನು ನದಿ ತೀರ ಪ್ರದೇಶದಲ್ಲಿ ಅಳವಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಗೆ ಸೂಚಿಸಿದರು.

ಬೇರೆ ಬೇರ ರಾಜ್ಯ, ಊರುಗಳಿಂದ ಆಗಮಿಸುವ ಭಕ್ತರಿಗೆ, ಸಾರ್ವಜನಿಕರಿಗೆ ಒದಗಿಸುವ ದೇವಸ್ಥಾನದ ಪ್ರಸಾದವನ್ನು ಆಹಾರ ಗುಣಮಟ್ಟ ಪರೀಕ್ಷೆಗೊಳಪಡಿಸಿ, ಸುರಕ್ಷಿತವಿದ್ದಲ್ಲಿ ಮಾತ್ರ ವಿತರಿಸಬೇಕು. ಕುಡಿಯುವ ನೀರನ್ನು ಸಹ ಪರೀಕ್ಷೆಗೊಳಪಡಿಸಬೇಕು. ಕಲುಷಿತ ಎಂದು ಕಂಡುಬರುವ ಬೋರ್‌ವೆಲ್ ಅಥವಾ ಯಾವುದೇ ನೀರಿನ ಮೂಲವನ್ನು ಕಡ್ಡಾಯವಾಗಿ ಸ್ಥಗಿತಗೊಳಿಸಬೇಕು. ಆ ನೀರನ್ನು ಯಾರೂ ಬಳಸದಂತೆ ಸೂಕ್ತ ಎಚ್ಚರಿಕೆ ಫಲಕ ಅಳವಡಿಸಬೇಕು. ಬಳಕೆಗೆ ಸಾಧ್ಯವಾಗದಂತೆ ಸೀಲ್ ಮಾಡಬೇಕು. ದೇವಸ್ಥಾನದ ಆವರಣ ಮತ್ತು ಗ್ರಾಮದ ರಸ್ತೆಗಳಲ್ಲಿನ ಒತ್ತುವರಿ ಕಟ್ಟಡ, ವ್ಯಾಪಾರ ಮಳಿಗೆಗಳನ್ನು ಯಾವುದೇ ಹಿಂಜರಿಕೆ ಇಲ್ಲದೆ ನಿಯಮಾನುಸಾರ ತೆರವುಗೊಳಿಸಬೇಕು ಎಂದು ಇಲಾಖಾ ಅಧಿಕಾರಿಗಳಿಗೆ ಅವರು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್‌ಕುಮಾರ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರ, ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭೀವೃದೀ ಪ್ರಾಧಿಕಾರದ ಕಾರ್ಯದರ್ಶಿ ಎಂ.ಎಚ್ ಪ್ರಕಾಶ್‌ರಾವ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಲಿಂಗರಾಜು ಟಿ., ಕೊಪ್ಪಳ ತಹಶೀಲ್ದಾರ ಬಸವರಾಜ ತೆನ್ನಳ್ಳಿ, ಕೊಪ್ಪಳ ತಾ.ಪಂ. ಇಒ ದುಂಡಪ್ಪ ತುರಾದಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಗಂಗಾವತಿ: ಹವಮಾನ ಆಧಾರಿತ ಬೆಳೆ ವಿಮಾ ಯೋಜನೆಯ ತಿರಸ್ಕೃತ ಪ್ರಸ್ತಾವನೆಗಳಿಗೆ ಆಕ್ಷೆಪಣೆ ಸಲ್ಲಿಸಲು ಅವಕಾಶ

ಕೊಪ್ಪಳ: 2025 ಹಿಂಗಾರು ಹಂಗಾಮಿನ ಹವಮಾನ ಆಧಾರಿತ ಬೆಳೆ ವಿಮಾ ಯೋಜನೆಯ ತಿರಸ್ಕ್ರತಗೊಂಡ ಪ್ರಸ್ತಾವನೆಗಳಿಗೆ ಆಕ್ಷೆಪಣೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಗಂಗಾವತಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

2025 ಹಿಂಗಾರು ಹಂಗಾಮಿನ ಹವಮಾನ ಆಧಾರಿತ ಬೆಳೆ ವಿಮಾ ಯೋಜನೆಯ ಮೆಣಸಿಕಾಯಿ ಬೆಳೆ ಸಮೀಕ್ಷೆಯ ದತ್ತಾಂಶಗಳನ್ನು ಬೆಳೆನೊಂದಣಿ ಪ್ರಸ್ತಾವನೆಗಳೊಂದಿಗೆ ಹೋಲಿಕೆ ಮಾಡಿ ಹೊಂದಾಣಿಕೆಯಾಗದ ತಿರಸ್ಕ್ರತಗೊಂಡ ಪ್ರಸ್ತಾವನೆಗಳಿಗೆ ರೈತರಿಂದ ಆಕ್ಷೆಪಣೆಗಳನ್ನು ಸ್ವಿಕರಿಸಲು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಗಂಗಾವತಿ ರವರ ಕಛೇರಿಯಿಂದ ನೋಟಿಸಗಳನ್ನು ಹೊರಡಿಸಲಾಗಿದೆ. ಈ ನೋಟಿಸ್‌ಗಳ ಪ್ರತಿಯನ್ನು ರೈತರ ವಿವರಗಳೊಂದಿಗೆ ಸಂಭಂದಿಸಿದ ತಹಶಿಲ್ದಾರರ ಕಛೇರಿ, ಗ್ರಾಮ ಪಂಚಾಯಿತಿ ಹಾಗೂ ನಾಡ ಕಚೇರಿಗಳ ನೋಟಿಸ್ ಬೊರ್ಡಗಳಲ್ಲಿ ಪ್ರಕಟಿಸಲಾಗಿರುತ್ತದೆ.

ಅದರಂತೆ, ರೈತರು ಹಸಿ ಮೆನಸಿನಕಾಯಿ ಬೆಳೆ ವಿಮೆಯನ್ನು ಪಾವತಿಸಿರುತ್ತಾರೆ. ಬೆಳೆ ಸಮೀಕ್ಷೆ ದತ್ತಾಂಶಗಳನ್ನು ಬೆಳೆ ನೊಂದಣಿ ಪ್ರಸ್ತಾವಣೆಗಳೊಂದಿಗೆ ಹೊಲಿಕೆ ಮಾಡಿ ಹೊಂದಾಣಿಕೆಯಾಗದ ತಿರಸ್ಕ್ರತಗೊಂಡ ಪ್ರಸ್ತಾವಣೆಗಳಿಗೆ ಅಗತ್ಯ ದಾಖಲಾತಿಗಳಾದ ವಿಮೆಗೆ ನೊಂದಾಯಿಸಿದ ಬೆಳೆ ಇರುವ ಪಹಣಿ ಪತ್ರಿಕೆ ಹಾಗೂ ಇತರೆ ದಾಖಲಾತಿಗಳೊಂದಿಗೆ ರೈತರು ಆಕ್ಷೇಪಣೆಗಳನ್ನು ಸಲ್ಲಿಸಬಹುದು. ಆಕ್ಷೇಪನೆಗಳನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಗಂಗಾವತಿ ರವರ ಕಛೇರಿಗೆ ಏಪ್ರಿಲ್ 23ರ ಒಳಗಾಗಿ ಸಲ್ಲಿಸಬೇಕೆಂದು ಪ್ರಕಟಣೆ ತಿಳಿಸಿದೆ.

# ಹೈನುಗಾರಿಕೆ ಮತ್ತು ಎರೆಹುಳು ಗೊಬ್ಬರ ತಯಾರಿಕೆ ತರಬೇತಿಗೆ ಅರ್ಜಿ ಆಹ್ವಾನ

ಕೊಪ್ಪಳ: ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ (ರಿ), ಹಳಿಯಾಳ ವತಿಯಿಂದ 12 ದಿನಗಳವರೆಗೆ ಹೈನುಗಾರಿಕೆ ಮತ್ತು ಎರೆಹುಳು ಗೊಬ್ಬರ ತಯಾರಿಕೆ ತರಬೇತಿ ಪ್ರಾರಂಭವಾಗಲಿದ್ದು, ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 50 ವಯೊಮಿತಿಯ ಗ್ರಾಮೀಣ ಭಾಗದ ಕೃಷಿ ಚುವಟಿಕೆಗಳಲ್ಲಿ ಆಸಕ್ತಿ ಇರುವ ರೈತ ಯುವಕ ಅಥವಾ ಯುವತಿಯರಿಗಾಗಿ 2026 ಎಪ್ರಿಲ್ ಕೋನೆಯ ವಾರದಲ್ಲಿ 12 ದಿನಗಳ ವರೆಗೆ ಹೈನುಗಾರಿಕೆ ಮತ್ತು ಎರೆಹುಳು ಗೊಬ್ಬರ ತಯಾರಿಕೆ ತರಬೇತಿ ಪ್ರಾರಂಭಿಸಲಾಗುತ್ತಿದ್ದು, ತರಬೇತಿಯು ಊಟ ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿರುತ್ತದೆ. ಸ್ವಯಂ ಉದ್ಯೋಗ ಮಾಡಲು ಈ ತರಬೇತಿಯು ಅನುಕೂಲವಾಗಲಿದ್ದು, 18 ರಿಂದ 50 ವಯಸ್ಸಿನ ಒಳಗಿರುವ ಆಸಕ್ತರು ಅರ್ಜಿ ಸಲ್ಲಿಸಬಹುದು. ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುವುದು.

ಈ ತರಬೇತಿಯಲ್ಲಿ ಕೌಶಲ್ಯ, ಸಾಧನಾ ಪ್ರೇರಣಾ ತರಬೇತಿ, ಉದ್ಯಮಶಿಲತೆಯ ದಕ್ಷ ಗುಣಗಳು, ಹೊಸ ಉದ್ಯಮದ ಸ್ಥಾಪನೆ ಬಗ್ಗೆ ಮಾಹಿತಿ, ಮಾರುಕಟ್ಟೆ ಸಮೀಕ್ಷೆ, ಮಾರಾಟದ ತಂತ್ರಗಳು, ಯಶಸ್ವಿ ಉದ್ಯಮಗಳಿಂದ ಅನುಭವ ಹಂಚಿಕೆ, ಕ್ಷೇತ್ರ ಭೇಟಿ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿನಿಂದ ಸಾಲ ಪಡೆದು ಸ್ವ–ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನಿತರ ಮಾಹಿತಿಗಳನ್ನು ಉಚಿತವಾಗಿ ನೀಡಲಾಗುವುದು.

ತರಬೇತಿಯಲ್ಲಿ ಭಾಗವಹಿಸುವವರು ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ ಸಂಪರ್ಕಿಸಲು ಹಾಗೂ ಸಂಸ್ಥೆಯ ದೂರವಾಣಿ ಸಂಖ್ಯೆ: 8970145354 ಹಾಗೂ 9483485489 ಗೆ ಅಥವಾ ಆನ್‌ಲೈನ್ ವೆಬ್‌ಸೈಟ್ ತಿತಿತಿ.ಔಜಣುಚಿಟುಥಿಚಿಟ.ಡಿಂ ಗೆ ಅರ್ಜಿ ಸಲ್ಲಿಸಬಹುದು ಎಂದು ಹಳಿಯಾಳ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

# ಬಸವೇಶ್ವರ ಜಯಂತಿ ಆಮಂತ್ರಣ ಪತ್ರಿಕೆ ಬಿಡುಗಡೆ ಮಾಡಿದ ಶಾಸಕ ಲಕ್ಷ್ಮಣ ಸವದಿ



**ಬೆಳಗಾವಿ ವಾರ್ತೆ ಅಥಣಿ:** ಸಮಾನತೆಯ ಹರಿಕಾರ, ವಿಶ್ವಗುರು ಜಗಜ್ಯೋತಿ ಬಸವಣ್ಣನವರ ತತ್ವ ಸಿದ್ಧಾಂತಗಳು, ಅವರ ಶೋಷಣೆ ಮುಕ್ತ ಸಮಾಜ ನಿರ್ಮಾಣದ ಕನಸು, 12ನೇ ಶತಮಾನದಲ್ಲಿಯೇ ಮಾಡಿದ ಕ್ರಾಂತಿಕಾರಕ ಬದಲಾವಣೆಗಳು. ಸಮಾಜದಲ್ಲಿ ಸಮಾನತೆ, ಸೌಹಾರ್ದತೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಲು ಅವರ ಸಂದೇಶಗಳು ದಾರಿದೀಪವಾಗಿವೆ ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ರವಿವಾರ ಪಟ್ಟಣದ ತಮ್ಮ ಗೃಹ ಕಛೇರಿಯಲ್ಲಿ ಬಸವೇಶ್ವರ ಕಮಿಟಿ ಸದಸ್ಯರಿಂದ ವಿಶ್ವಗುರು ಬಸವೇಶ್ವರ ಜಯಂತಿ ಪ್ರಯುಕ್ತ ಸಮಾರಂಭದ ಆಮಂತ್ರಣ ಪತ್ರಿಕೆಗಳನ್ನು ಬಿಡುಗಡೆ ಮಾಡಿ ಮಾತನಾಡಿದರು. ಬಸವೇಶ್ವರರು ಸಾರಿದ "ಕಾಯಕವೇ ಕೈಲಾಸ" ಎಂಬ ತತ್ವವನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಬದುಕಿನಲ್ಲಿ ಯಶಸ್ಸು ಸಾಧಿಸಬೇಕು. "ಇವನಾರವ, ಇವನಾರವ, ಎಂದೇನಿಸದೆ ಇವ ನಮ್ಮವ ಇವ ನಮ್ಮವ" ಎನ್ನುವಂತಹ ಅದ್ಭುತವಾದ ಮಾನವೀಯ ಮೌಲ್ಯಗಳ ನಿಧಿಯನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡುವ ಮೂಲಕ ಬಸವಣ್ಣನವರು ಸಮಾಜದಲ್ಲಿನ ಜಾತಿ, ಬೇಧಭಾವ ಹಾಗೂ ಅಸಮಾನತೆಯನ್ನು ಹೋಗಲಾಡಿಸಲು ಮತ್ತು ಎಲ್ಲರಲ್ಲಿಯೂ ಸಮಾನತೆಯನ್ನು ಬೆಳೆಸುವಲ್ಲಿ ಪ್ರಾಮಾಣಿಕರಾಗಿ ಶ್ರಮಿಸಿದ್ದು, ಇಂಥಹ ಮಹಾನ್ ಶರಣರು ಸತ್ಪುರುಷರು ಇಂದಿನ ಯುವ ಪೀಳಿಗೆಗೆ ಮಾದರಿಯಾಗಿದ್ದಾರೆ. ಅವರ ತತ್ವಾದರ್ಶಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಜಯಂತಿ ಆಚರಣೆ ಸಾರ್ಥಕತೆ ಪಡೆಯುತ್ತದೆ ಎಂದರು

"ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸುವುದು" □ ಜಗಜ್ಯೋತಿ ಬಸವೇಶ್ವರರ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸುವುದು ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಭಕ್ತಿ ಪೂರ್ಣ ಕಾರ್ಯಕ್ರಮಗಳು ಹಾಗೂ ಸಮಾಜ ಸೇವಾ ಚಟುವಟಿಕೆಗಳನ್ನು ಆಯೋಜಿಸಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಅವರು ಮನವಿ ಮಾಡಿದರು.

ಈ ವೇಳೆ ಅಧ್ಯಕ್ಷ ಎಸ್ ಆರ್ ಘೋಳಪ್ಪನವರ, ಮುಖಂಡರಾದ ಶ್ರೀಶೈಲ ನಾಯಿಕ, ಶಿವಾನಂದ ಹುನ್ನೂರ, ರಮೇಶ್ ಕಾಗಲೆ, ಮಾರುತಿ ಐಗಳಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಫೈರೋಜ್ ಪಠಾಣ್ ಕುಟುಂಬಕ್ಕೆ ವೈಶಾಲಿ ಸಾಂತ್ವನ



**ಬೆಳಗಾವಿ ವಾರ್ತೆ ಧಾರವಾಡ:** ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಾಗಿದ್ದ ದಿವಂಗತ ಫೈರೋಜ್ ಪಠಾಣ್ ಅವರ ನಿವಾಸಕ್ಕೆ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯೆ ಹಾಗೂ ಶಾಸಕ ವಿನಯ ಕುಲಕರ್ಣಿ ಅವರ ಪುತ್ರಿ ವೈಶಾಲಿ ವಿನಯ ಕುಲಕರ್ಣಿ ಅವರು ಭೇಟಿ ನೀಡಿ, ಮೃತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಫೈರೋಜ್ ಪಠಾಣ್ ಅವರ ಅಕಾಲಿಕ ನಿಧನಕ್ಕೆ ತೀವ್ರ ಸಂತಾಪ ಸೂಚಿಸಿದ ವೈಶಾಲಿ ವಿನಯ ಕುಲಕರ್ಣಿ ಅವರು, ಮೃತರ ಕುಟುಂಬದ ಸದಸ್ಯರೊಂದಿಗೆ ಮಾತನಾಡಿ, ಅವರ ದುಃಖದಲ್ಲಿ ನಾವೆಲ್ಲರೂ ಭಾಗಿಯಾಗಿದ್ದೇವೆ. ಪಕ್ಷ ಮತ್ತು ನಮ್ಮ ಕುಟುಂಬದ ವತಿಯಿಂದ ನೀಡಬೇಕಾದ ಎಲ್ಲಾ ರೀತಿಯ ಸಹಕಾರ ಮತ್ತು ಬೆಂಬಲವನ್ನು ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸ್ಥಳೀಯ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಮತ್ತು ಫೈರೋಜ್ ಪಠಾಣ್ ಅವರ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

# ವಿವಿಧ ಪದವಿ ಕೋರ್ಸ್‌ಗಳ ಪ್ರವೇಶಾತಿ ಪ್ರಾರಂಭ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಇಲ್ಲಿನ ಆಲಮಟ್ಟಿ ರಸ್ತೆಯ ಮದರಿ ಕಲ್ಯಾಣ ಮಂಟಪದ ಹಿಂಭಾಗದಲ್ಲಿರುವ 'ಮಾದರಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಸತಿಯುಕ್ತ ಸರಕಾರಿ ಪ್ರಥಮ ದರ್ಜೆ ಕಾಲೇಜ'ನಲ್ಲಿ 2026–27ನೇ ಶೈಕ್ಷಣಿಕ ಸಾಲಿಗಾಗಿ ಬಿ.ಎ, ಬಿ.ಎಸ್ಸಿ, ಬಿ.ಕಾಂ ಮತ್ತು ಬಿ.ಸಿ.ಎ ಕೋರ್ಸ್‌ಗಳಿಗೆ ಪ್ರವೇಶಾತಿ ಆರಂಭವಾಗಿದೆ ಎಂದು ಕಾಲೇಜಿನ ಪ್ರಾಂಶುಪಾಲರಾದ ಡಾ. ಎಸ್.ಎಲ್. ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪತ್ರಿಕೋದ್ಯಮ ಕೋರ್ಸ್ ಲಭ್ಯ:** ತಾಲ್ಲೂಕಿನಲ್ಲಿಯೇ ಪ್ರಥಮ ಬಾರಿಗೆ ಈ ಕಾಲೇಜಿನಲ್ಲಿ ಬಿ.ಎ ಪದವಿಯಲ್ಲಿ 'ಪತ್ರಿಕೋದ್ಯಮ' (Journalism) ವಿಷಯವನ್ನು ಈ ವರ್ಷದಿಂದ ಹೊಸದಾಗಿ ಪರಿಚಯಿಸಲಾಗಿದೆ. ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ವಿದ್ಯಾರ್ಥಿಗಳಿಗೆ ಇದು ಸುವರ್ಣಾವಕಾಶವಾಗಿದೆ.

**ಮೀಸಲಾತಿ ಮತ್ತು ಸೀಟುಗಳ ವಿವರ:** ಕಾಲೇಜಿನಲ್ಲಿ ಪ್ರತಿ ಕೋರ್ಸ್‌ಗೆ ಕೇವಲ 40 ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ಪಡೆಯಲು ಅವಕಾಶವಿದೆ. ಸರ್ಕಾರದ ನಿಯಮದಂತೆ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಶೇ. 60 ರಷ್ಟು ಹಾಗೂ ಹಿಂದುಳಿದ ವರ್ಗ ಮತ್ತು ಇತರರಿಗೆ ಶೇ. 40 ರಷ್ಟು ಸೀಟುಗಳನ್ನು ನಿಗದಿಪಡಿಸಲಾಗಿದೆ. ಯಾವುದೇ ರೀತಿಯ ದೇಣಿಗೆ (Donation) ಇಲ್ಲದೆ ಮೆರಿಟ್ ಆಧಾರದ ಮೇಲೆ ಪ್ರವೇಶ ನೀಡಲಾಗುವುದು.

**ವಿಶೇಷ ಸೌಲಭ್ಯಗಳು:** ರಾಜ್ಯದ ಆಯ್ದ ಹತ್ತು ಮಾದರಿ ವಸತಿಯುಕ್ತ ಕಾಲೇಜುಗಳಲ್ಲಿ ಇದೂ ಒಂದಾಗಿದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಪೂರಕವಾಗಿ ಸುಸಜ್ಜಿತ ಗ್ರಂಥಾಲಯ, ಪ್ರಯೋಗಾಲಯ, ಸ್ಮಾರ್ಟ್ ಕ್ಲಾಸ್ ಹಾಗೂ ಪರಿಣಿತ ಉಪನ್ಯಾಸಕರ ತಂಡ ಇಲ್ಲಿದೆ. ಜೊತೆಗೆ ಉದ್ಯೋಗಾಧಾರಿತ ಉಚಿತ ತರಬೇತಿ ಮತ್ತು ಶಿಷ್ಯವೇತನದ ಸೌಲಭ್ಯವೂ ಲಭ್ಯವಿದೆ.

**ಮಾಹಿತಿಗಾಗಿ ಸಂಪರ್ಕಿಸಿ:** ಪ್ರವೇಶಾತಿ ಬಯಸುವ ಆಸಕ್ತ ವಿದ್ಯಾರ್ಥಿಗಳು ಕಾಲೇಜಿನ ಕಚೇರಿಯನ್ನು ಅಥವಾ ಈ ಕೆಳಗಿನ ದೂರವಾಣಿ ಸಂಖ್ಯೆಗಳನ್ನು ಸಂಪರ್ಕಿಸಲು ಕೋರಲಾಗಿದೆ.

# ಕನ್ನಡದ ವಿಮರ್ಶೆ ಒಂದು ವರ್ಗಕ್ಕೆ ಸೀಮಿತವಾಗಿದೆ



**ಬೆಳಗಾವಿ ವಾರ್ತೆ ವಿಜಯಪುರ:** ಕನ್ನಡದ ವಿಮರ್ಶಕರು ಮಹಿಳಾ ಕಾವ್ಯಗಳು ಚೆನ್ನಾಗಿವೆ ಎಂದು ಹೇಳುತ್ತಿದ್ದಾರೆ. ಆದರೆ ಅವರು ಏನನ್ನು ಹೇಳಲು ಹೊರಟಿದ್ದಾರೆ ಎಂದು ಹೇಳುತ್ತಿಲ್ಲ. ಕನ್ನಡದ ವಿಮರ್ಶಕರು ಮಾತನಾಡುತ್ತಿರುವುದರಿಂದ ವಿಮರ್ಶೆ ಒಂದು ವರ್ಗಕ್ಕೆ ಸೀಮಿತವಾಗಿದೆ ಎಂದು ಹಿರಿಯ ಸಾಹಿತಿ ಕೇಶವ ಶರ್ಮಾ ಹೇಳಿದರು.

ನಗರದ ದರಾಬಾರ್ ಪ್ರೌಢ ಶಾಲೆ ಮೈದಾನದಲ್ಲಿ ಮೇ ಸಾಹಿತ್ಯ ಮೇಳ ವಿಜಯಪುರ ಬಳಗ ದಲಿತ ಮತ್ತು ಪ್ರಗತಿಪರ ಸಂಘಟನೆಗಳ ಆಶ್ರಯದಲ್ಲಿ ಏಪ್ರಿಲ್ 10ರಿಂದ 14ರ ವರೆಗೆ 5ದಿನಗಳ ಕಾಲ ಹಮ್ಮಿಕೊಂಡಿರುವ ಬಿಜಾಪುರ ಬುದ್ಧ, ಬಸವ, ಬಾಬಾಸಾಹೇಬ ಅಂಬೇಡ್ಕರ್ ಪುಸ್ತಕ ಮೇಳದಲ್ಲಿ ಎರಡನೇ ದಿನದ ಮೂರನೇ ಲೇಖಕರೊಂದಿಗೆ ಸಂವಾದದಲ್ಲಿ ಮಾತನಾಡಿದರು.

ಕನ್ನಡದಲ್ಲಿ ಹೊಸ ಲೇಖಕರ ಬಗ್ಗೆ ವಿಮರ್ಶಕರು ಮಾತನಾಡುತ್ತಿಲ್ಲ. ಜಾಗತಿಕ ಮಟ್ಟದಲ್ಲಿ ಇರುವ ಅಧಿಕಾರ ಕೇಂದ್ರಗಳು ಸ್ಥಳೀಯ ಅಧಿಕಾರ ಕೇಂದ್ರಗಳಲ್ಲಿಯೂ ನಡೆಯುತ್ತಿರುವ ಜನ ವಿರೋಧಿ ನೀತಿಗಳನ್ನು ವಿಮರ್ಶಕರು ವಿರೋಧಿಸಬೇಕಿದೆ.

ಸಂವಾದದಲ್ಲಿ ಹಿರಿಯ ಸಾಹಿತಿ ರವೀಂದ್ರ ಹಳಿಂಗಳಿ ಅವರು ಮಾತನಾಡಿ, ಜಮಖಂಡಿಯಲ್ಲಿ ಬೀಡಿ ಕಟ್ಟುವ ಮುಸ್ಲಿಂ ಕಾರ್ಮಿಕರು ಇದ್ದರು. ಎಲ್ಲರೂ ಕೂಡಾ ಸಾಮರಸ್ಯದಿಂದ ಇದ್ದರು, ಜಗತ್ತಿನ ಶೇ. 85 ರಷ್ಟು ಜನ ನಿರ್ಗತಿಕರಾಗಿದ್ದಾರೆ. ಜನರ ಸಮಸ್ಯೆಗಳಿಗೆ ಸ್ಪಂದಿಸುವ ಹೋರಾಟವನ್ನು ನಾವು ಕಟ್ಟಬೇಕಿದೆ. ಇವತ್ತಿಗೂ ಸಹ ಜನರ ಉಣ್ಣು ಮತ್ತು ತಿನ್ನುವ ಅಭಿರುಚಿ ಮುಗಿದಿಲ್ಲ. ಇನ್ನು ಕಲೆ ಮತ್ತು ಸಂಸ್ಕೃತಿ ಬಗ್ಗೆ ಚರ್ಚೆ ಮಾಡುವುದು ಹೇಗೆ ಎಂದರು.

ಡಾ. ಜಾಜಿ ದೇವೇಂದ್ರಪ್ಪ ಅವರು ಮಾತನಾಡಿ, ಸಾಹಿತಿಗಳ ಮೇಲೆ ಪರಿಸರ ಬಹಳಷ್ಟು ಪ್ರಭಾವ ಬೀರಿದೆ ಎಂದು ಹೇಳಿದರು. ವೈಚಾರಿಕ ಲೇಖಕರಿಗೆ ಬೆದರಿಕೆಗಳು ಬರುತ್ತಿವೆ. ಆ ಸವಾಲನ್ನು ಎದುರಿಸಿ ಮುಂದುವರಿಯಬೇಕಾಗಿದೆ ಎಂದು ಹೇಳಿದರು.

ಸಂವಾದವನ್ನು ಚಂದ್ರಪ್ರಭಾ ಬಾಗಲಕೋಟ ಅವರು ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಬಸವರಾಜ ಸೂಳಿಬಾವಿ, ಅನಿಲ ಹೊಸಮನಿ, ಚೆನ್ನು ಕಟ್ಟಿಮನಿ, ಸುರೇಶ ಬಿಜಾಪುರ, ವೈ.ಎಸ್. ಗುಣಕಿ, ಸಂಘರ್ಷ ಹೊಸಮನಿ, ಲಾಯಪ್ಪ ಇಂಗಳೆ, ಕಲ್ಲಪ್ಪ ಶಿವಶರಣ, ಲಕ್ಷ್ಮಣ ಹಂದ್ರಾಳ, ಭಾಗ್ಯಶ್ರೀ ಹೊಸಮನಿ ಉಪಸ್ಥಿತರಿದ್ದರು.

# ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ



**ಬೆಳಗಾವಿ ವಾರ್ತೆ ನವಲಗುಂದ:** ಸರಳ ಹಾಗೂ ಕಡಿಮೆ ವೆಚ್ಚದಲ್ಲಿ ಉಚಿತ ಸಾಮೂಹಿಕ ವಿವಾಹಗಳು ನಡೆದರೆ ಹೆಚ್ಚು ಅನುಕೂಲವಾಗುತ್ತದೆ ಎಂದು ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದ ಮಹಾಸ್ವಾಮೀಜಿ ನುಡಿದರು.

ತಾಲ್ಲೂಕಿನ ಶಾನವಾಡ ಗ್ರಾಮದಲ್ಲಿ ಬುದ್ದ–ಬಸವ ಅಂಬೇಡ್ಕರ ಜನಜಾಗೃತಿ ವೇದಿಕೆ ತಾಲ್ಲೂಕು ಘಟಕ ನವಲಗುಂದ, ಸತೀಶ ಜಾರಕಿಹೊಳಿ ಅಭಿಮಾನಿ ಬಳಗ ಹಾಗೂ ವಿನೋದ ಅಸೂಟಿ ಅಭಿಮಾನಿ ಬಳಗದ ವತಿಯಿಂದ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ ಸಾನಿಧ್ಯ ವಹಿಸಿ ಆಶೀರ್ವದಿಸಿದರು.

ಶಾಸಕ ಎನ್ ಎಚ್ ಕೋನರಡ್ಡಿ ಮಾತನಾಡಿ ಸತೀಶ ಜಾರಕಿಹೊಳಿ ಅಭಿಮಾನಿಗಳ ಬಳದ ವತಿಯಿಂದ ಪ್ರತಿವರ್ಷ ಜರಗುವ ಸಾಮೂಹಿಕ ವಿವಾಹಗಳು ಮಠಾಧೀಶರ ಆಶೀರ್ವಾದದೊಂದಿಗೆ ನೆಮ್ಮದಿ ಜೀವನಕ್ಕೆ ನಾಂದಿ ಹಾಡುತ್ತವೆ. ವಧು–ವರರು ದಾಂಪತ್ಯ ಜೀವನವನ್ನು ಮಾದರಿಯಾಗಿ ನಡೆಸುವ ಮೂಲಕ ಸಮಾಜಕ್ಕೆ ಮಾದರಿಯಾಗಬೇಕು' ಎಂದು ಸಲಹೆ ನೀಡಿದರು.

ಕೆಪಿಸಿಸಿ ಸದಸ್ಯ ವಿನೋದ ಅಸೂಟಿ ಮಾತನಾಡಿ ಸಾಮೂಹಿಕ ವಿವಾಹವು ಸಮಾಜದಲ್ಲಿ ಸಮಾನತೆ, ಸಹಕಾರ ಮತ್ತು ಸೌಹಾರ್ದತೆಯ ಸಂದೇಶವನ್ನು ಸಾರುತ್ತವೆ ಇಂದು ಸಂಸಾರ ಜೀವನಕ್ಕೆ ಪಾದಾರ್ಪಣೆ ಮಾಡಿರುವುದು ಆದರ್ಶವಾದುದು. ಎಲ್ಲರೂ ಮಿತಸಂತಾನ ಮತ್ತು ಮಕ್ಕಳ ಶಿಕ್ಷಣಕ್ಕೆ ಪ್ರಾಮುಖ್ಯತೆ ನೀಡಬೇಕು ಎಂದರು.

ನವಲಗುಂದ ಗವಿಮಠದ ಬಸವಲಿಂಗ ಸ್ವಾಮೀಜಿ, ನವಲಗುಂದ ಪಂಚಗೃಹ ಹಿರೇಮಠದ ನೂತನ ಉತ್ತರಾಧಿಕಾರಿಗಳಾದ ವೀರಬಸವ ದೇವರು ಇತರರು ಮಾತನಾಡಿದರು.

ಜಿಲ್ಲಾ ವಾಲ್ಮೀಕಿ ಮಹಾಸಭಾ ಅಧ್ಯಕ್ಷ ಮೋಹನ ಗುಡಿಸಲಮನಿ, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷರಾದ ವರ್ಧಮಾನಗೌಡ ಹಿರೇಗೌಡ, ಸದುಗೌಡ ಪಾಟೀಲ, ಬಿ ಎಲ್ ಹಳ್ಳಿಕೇರಿ, ರಾಮಣ್ಣ ಕೊಪ್ಪದ, ಸಾಮೂಹಿಕ ವಿವಾಹ ಆಯೋಜಕರಾದ ಮಂಜುನಾಥ ವೀರಪ್ಪನವರ, ಶರೀಪಶಿವಯೋಗಿ ಸೂರಪ್ಪನವರ ಸಚಿನ ಗಾಡಗೋಳಿ, ಶರಣು ಯಮನೂರ, ಚರಂತಯ್ಯಾ ಚಿಕಮಠ, ಸುಭಾಸ ದುಬ್ಬದಮಟ್ಟಿ, ಅಮರಪ್ಪ ಆಮಣ್ಣವರ, ಆನಂದ ತೋರಗಲ್ಲ, ಶೇಕಪ್ಪ ಚುಲಕಿ ಸೇರಿ ಇತರರು ವೇದಿಕೆಯಲ್ಲಿದ್ದರು.

# ಗಿಡಗಳು ತಾಯಿಯ ಸಮಾನ: ರಾಜೇಂದ್ರ ಹುನ್ನೂರು



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಗಿಡಗಳು ಪರಿಸರವನ್ನು ಪೋಷಿಸಿ, ಬೆಳೆಸಿ, ಸಂರಕ್ಷಿಸುತ್ತವೆ. ನಮಗೆ ಜನ್ಮ ನೀಡಿದ ತಾಯಿ ಹೇಗೆ ನಮ್ಮನ್ನು ರಕ್ಷಿಸುತ್ತಾಳೋ, ಹಾಗೆಯೇ ಮರಗಿಡಗಳು ಭೂಮಿಯ ಜೀವಸಂಕುಲವನ್ನು ಕಾಯುತ್ತವೆ. ಆದ್ದರಿಂದ ಗಿಡಗಳು ತಾಯಿಯ ಸಮಾನ ಎಂದು ಮುದ್ದೇಬಿಹಾಳ ಅರಣ್ಯ ಇಲಾಖೆಯ ಡಿ.ಆರ್.ಎಫ್.ಓ ರಾಜೇಂದ್ರ ಹುನ್ನೂರು ಅಭಿಪ್ರಾಯಪಟ್ಟರು.

ತಾಲ್ಲೂಕಿನ ಮುದ್ನಾಳ ಗ್ರಾಮದಲ್ಲಿ (ಹಡಲಗೇರಿ ದತ್ತು ಗ್ರಾಮ) ಮಾದರಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಸತಿಯುಕ್ತ ಸರಕಾರಿ ಪ್ರಥಮ ದರ್ಜೆ ಕಾಲೇಜು ವತಿಯಿಂದ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆ (ಓಖಖ) ವಿಶೇಷ ವಾರ್ಷಿಕ ಶಿಬಿರದಲ್ಲಿ 'ಅರಣ್ಯ ಸಂರಕ್ಷಣೆ ಮಹತ್ವ' ಎಂಬ ವಿಷಯದ ಕುರಿತು ಅವರು ವಿಶೇಷ ಉಪನ್ಯಾಸ ನೀಡಿದರು.

**ಪರಿಸರ ರಕ್ಷಣೆ ನಮ್ಮ ಹೊಣೆ:** ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರೊ. ಲತಾಶ್ರೀ ಡಿ.ಪಿ. ಅವರು ಮಾತನಾಡಿ, ಪರಿಸರ ಸಮತೋಲನ ಕಾಪಾಡುವುದು ಇಂದಿನ ಅಗತ್ಯವಾಗಿದೆ. ಪ್ರತಿಯೊಬ್ಬರೂ ತಮ್ಮ ಮನೆ, ಹೊಲಗದ್ದೆ ಹಾಗೂ ಶಾಲಾ ಆವರಣದಲ್ಲಿ ಕನಿಷ್ಠ ಒಂದೊಂದು ಗಿಡವನ್ನಾದರೂ ನೆಟ್ಟು ಪೋಷಿಸುವ ಮೂಲಕ ಪರಿಸರ ರಕ್ಷಣೆಗೆ ಕೈಜೋಡಿಸಬೇಕು," ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರೊ. ಮಂಜುಳಾ ಡಿ.ಓ, ಪ್ರೊ. ಪ್ರದೀಪ್ ಕುಮಾರ್ ಜಗ್ಗಲ್, ಪ್ರೊ. ರೇವಣಸಿದ್ದಪ್ಪ ಅಮ್ಮಣ್ಣಿ, ವಿ.ಡಿ. ಬರುಟಗಿ, ಸಿದ್ದು ಸತ್ಯಗೋಳ, ಎಸ್.ಎ. ಮೆರೆಖೊರ ಹಾಗೂ ಸಿ.ಕೆ. ಪತ್ತಾರ ಉಪಸ್ಥಿತರಿದ್ದರು.

ಲಕ್ಷ್ಮಿ ಕಾರ್ಯಕ್ರಮ ನಿರೂಪಿಸಿದರು, ಮಹಾಂತೇಶ ಸ್ವಾಗತಿಸಿದರು.

# ರಾಷ್ಟ್ರ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರ ಮುಖ್ಯ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರ:** ಇಂದಿನ ದಿನಗಳಲ್ಲಿ ಡಿಜಿಟಲ್ ತಂತ್ರಜ್ಞಾನ ಹಾಗೂ ಶೈಕ್ಷಣಿಕ ತಂತ್ರಜ್ಞಾನ ಮುಖ್ಯವಾಗಿದೆ ಎಂದು ಮಾಜಿ ಸಚಿವ ಹಾಗೂ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ಸಮೀಪದ ಚಿಕ್ಕದಿನಕೊಪ್ಪ ಸರಕಾರಿ ಪ್ರೌಢ ಶಾಲೆಯಲ್ಲಿ ನಡೆದ ಕೇಂದ್ರ ಸರ್ಕಾರದ ತೈಲ ಮತ್ತು ನೈಸರಗಿಕ ಅನಿಲ ನಿಗಮ ನಿಯಮಿತ ಸಂಸ್ಥೆ ಸಿಎ???ಆರ್ ಯೋಜನೆ ಅಡಿ ವಿದ್ಯಾರ್ಥಿಗಳಿಗೆ ಡಿಜಿಟಲ್ ಸ್ಮಾರ್ಟ್ ಬೋರ್ಡ್ ಮತ್ತು ಶಿಕ್ಷಾ ಟ್ಯಾಬ್ಲೆಟ್ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು. ವಿದ್ಯಾರ್ಥಿಗಳು ತಮ್ಮ ಕೌಶಲ್ಯ ಮತ್ತು ಪ್ರತಿಭೆಯನ್ನು ಅಭಿವೃದ್ಧಿಪಡಿಸಿಕೊಂಡು ರಾಷ್ಟ್ರ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಬೇಕು ಮತ್ತು ಈ ತಂತ್ರಜ್ಞಾನ ಬಳಿಸಿಕೊಂಡು ತಮ್ಮ ಬದುಕು ಕಟ್ಟಿಕೊಳ್ಳಬೇಕೆಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ವಿಠ್ಠಲ ಹಲಗೇಕರ ಮಕ್ಕಳು ಉತ್ತಮ ಶಿಕ್ಷಣವನ್ನು ಪಡೆದು ತಮ್ಮ ಕನಸು ಸಾಕಾರಗೊಳಿಸಿ, ಜ್ಞಾನ, ಶಿಸ್ತು ಮತ್ತು ನೈತಿಕ ಮೌಲ್ಯಗಳಿಂದ ಸಮೃದ್ಧರಾಗಿ ದೇಶದ ಉನ್ನತಿಗೆ ಶ್ರಮಿಸಬೇಕೆಂದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಅರವಿಂದ ಪಾಟೀಲ, ಸಮಾಜಸೇವಕ ಹಾಗೂ ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಪ್ರಮೋದ ಕೋಚೇರಿ, ಧನಶ್ರೀ ದೇಸಾಯಿ, ಬಿಇಒ ಪಿ.ರಾಮಪ್ಪ, ಮಂಜುನಾಥ ಹತ್ತಿ, ಸಂತೋ? ನಾಯಕ, ಶಂಕರ ಕಮ್ಮಾರ, ಪ್ರಭಾರಿ ಮುಖ್ಯಾಧ್ಯಾಪಕ ಪ್ರಶಾಂತ ಪಾರಿಧಿ, ಎಸ್.ಡಿ.ಎಮ್.ಸಿ ಸದಸ್ಯರು ಹಾಗೂ ಗ್ರಾಮಸ್ಥರು ಇದ್ದರು. ಮಂಜುನಾಥ ಅಂಬಡಗಟ್ಟಿ ನಿರೂಪಿಸಿದರು. ಎಸ್.ವಿ.ಕಲ್ಮಠ ವಂದಿಸಿದರು.

# ಮುದ್ದೇಬಿಹಾಳ: 'ಚಾಂಪಿಯನ್ ಟ್ರೋಫಿ–2026' ಕ್ರಿಕೆಟ್ ಪಂದ್ಯಾವಳಿಯ ಕರಪತ್ರ ಬಿಡುಗಡೆ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ 'ಮುದ್ದೇಬಿಹಾಳ ಚಾಂಪಿಯನ್ ಟ್ರೋಫಿ–2026' ಹಾರ್ಡ್ ಟೆನ್ನಿಸ್ ಬಾಲ್ ಓಪನ್ ಕ್ರಿಕೆಟ್ ಟೋರ್ನಾಮೆಂಟ್‌ನ ಕರಪತ್ರವನ್ನು ಅಧಿಕೃತವಾಗಿ ಬಿಡುಗಡೆಗೊಳಿಸಲಾಯಿತು.

ಕರಪತ್ರ ಬಿಡುಗಡೆ ಮಾಡಿ ಮಾತನಾಡಿದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಹಾಗೂ ಹಿರಿಯ ಕ್ರಿಕೆಟ್ ಆಟಗಾರರಾದ ಕಾಮರಾಜ ಬಿರಾದಾರ, ಪುರಸಭೆ ಮಾಜಿ ಅಧ್ಯಕ್ಷ ಮಹಿಬೂಬ್ ಗೊಳಸಂಗಿ ಹಾಗೂ ಹಿರಿಯ ಕ್ರಿಕೆಟ್ ಆಟಗಾರ ಹುಸೇನ್ ಮುಲ್ಲಾ ಅವರು, ಸ್ಥಳೀಯ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಈ ಬೃಹತ್ ಟೋರ್ನಾಮೆಂಟ್ ಆಯೋಜಿಸಲಾಗಿದೆ. ಯುವಜನತೆ ಕ್ರೀಡೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಓಖಗಙ ಪ್ರಧಾನ ಕಾರ್ಯದರ್ಶಿ ಸದ್ದಾಂ ಕುಂಟೋಜಿ ಮತ್ತು ಸರ್ಕಾರಿ ಆಸ್ಪತ್ರೆಯ ನಾಮನಿರ್ದೇಶಕ ಸದಸ್ಯ ರಫೀಕ್ ಶಿರೋಳ ಅವರು ಪಂದ್ಯಾವಳಿಯ ಯಶಸ್ಸಿಗೆ ಎಲ್ಲರ ಸಹಕಾರ ಕೋರಿದರು.

ಕಾರ್ಯಕ್ರಮದಲ್ಲಿ ಪಂಚ ಗ್ಯಾರಂಟಿ ಸಮಿತಿ ಸದಸ್ಯ ಸಂಗಪ್ಪ ಮೇಲಿನಮನಿ, ಕಾಂಗ್ರೆಸ್ ಪಕ್ಷದ ಮುಖಂಡರಾದ ಸಾಹೇಬ್ ಲಾಲ್ ದೇಸಾಯಿ ಹಾಗೂ ಬಬು ಹುಣಚಗಿ, ಹಿರಿಯ ಕ್ರಿಕೆಟ್ ಆಟಗಾರರಾದ ಶಬೀರ್ ಮೊಮಿನ್ ಮತ್ತು ರಾಜು ಜಾಧವ್ ಅತಿಥಿಗಳಾಗಿ ಉಪಸ್ಥಿತರಿದ್ದರು.

ಎಂ.ಪಿ.ಎಲ್ (ಒಕಐ) ಚಾಂಪಿಯನ್ ಟ್ರೋಫಿ ಕ್ರಿಕೆಟ್ ಟೂರ್ನಮೆಂಟ್ ಅಧ್ಯಕ್ಷ ರಂಜಾನ್ ನದಾಫ ಅವರ ನೇತೃತ್ವದಲ್ಲಿ ನಡೆದ ಈ ಸಭೆಯಲ್ಲಿ ಸಮಿತಿಯ ಸದಸ್ಯರಾದ ನಜೀರ್ ದಂಡಿಯಾ, ಸುಹೇಬ್ ಪಟೇಲ, ಯಲ್ಲಪ್ಪ ಮ್ಯಾಗೇರಿ, ಸಾಜಿದ್ ರುದ್ರವಾಡಿ, ಸೂಫಿಹಾನ ಮೊಮಿನ್, ದಾವಲ್ ಗೊಳಸಂಗಿ, ದೇವರಾಜ ಉಪ್ಪಾರ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು.

ಈ ಪಂದ್ಯಾವಳಿಯು ಮುದ್ದೇಬಿಹಾಳದ ಕ್ರೀಡಾ ಇತಿಹಾಸದಲ್ಲಿ ವಿಶೇಷ ಮೈಲಿಗಲ್ಲಾಗಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ತಂಡಗಳು ನೋಂದಾಯಿಸಿಕೊಳ್ಳುವಂತೆ ಸಮಿತಿ ಮನವಿ ಮಾಡಿದೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001